# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 151 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 02–01–2025 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 151 | RNI No: KARKAN/2023/88462 | KA/SK/CTA-874/2024-2026 | Chitradurga | Date: 02-01-2025 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

2017 ರಿಂದ 23 ಅವಧಿಯ ಅಭಿವೃದ್ಧಿ, ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪ್ರಕಟ 2

ಸಹಕಾರ ಕ್ಷೇತ್ರದ ಬೆಳವಣಿಗೆಗೆ ವಿಶ್ವಾಸಾರ್ಹತೆ ಮುಖ್ಯ–ಅಗ್ರೋ ಶಿವಣ್ಣ 3

ಸಂವಿಧಾನದ ರಕ್ಷಕರ ಅತ್ಯಂತ ಕಿರು ಪರಿಚಯ........ 4



ಸುದ್ದಿ, ಜಾಹಿರಾತಿಗೆ 9686622252


# ಮಾರಿಕಣಿವೆ ಡ್ಯಾಂ ಕೋಡಿಗೆ ಕ್ಷಣಗಣನೆ

## ಜಲಾಶಯಕ್ಕೆ 693 ಕ್ಯೂಸೆಕ್ ಒಳಹರಿವು ನೀರು ಸಂಗ್ರಹ। ಪ್ರಸ್ತುತ 129.60 ಅಡಿಗೆ ತಲುಪಿದ ಜಲಾಶಯದ ನೀರಿನ ಮಟ್ಟ

» ಪಿ.ಟಿ.ಸಿದ್ದೇಶ್ ಲಕ್ಕಿಹಳ್ಳಿ

ನಮ್ಮಜನ ವಿಶೇಷ

ಹೊಸದುರ್ಗ: ತಾಲೂಕಿನ ವಿವಿ ಸಾಗರ ಜಲಾಶಯ ಮತ್ತೊಮ್ಮೆ ಭರ್ತಿಯಾಗಿದ್ದು, ಕೋಡಿಬೀಳಲು ದಿನಗಣನೆ ಶುರುವಾಗಿದೆ. ಪ್ರಥಮ ಬಾರಿಗೆ 1934 ರಲ್ಲಿ 2ನೇ ಬಾರಿಗೆ 2022 ರಲ್ಲಿ ಭರ್ತಿಯಾಗಿತ್ತು. ಮತ್ತೆ ಇದೀಗ, ಜಲಾಶಯಕ್ಕೆ ದಾಖಲೆ ಮಟ್ಟದ ನೀರು ಹರಿದು ಬಂದಿದ್ದು, ಪ್ರಸ್ತುತ ಜಲಾಶಯದ ನೀರಿನ ಮಟ್ಟ 129.60 ಅಡಿಗೆ ಬಂದು ನಿಂತಿದೆ.

ಇನ್ನೂ ಜಲಾಶಯಕ್ಕೆ ಅರ್ಧ ಅಡಿ ನೀರು ಬಂದರೆ, ಇನ್ನೊಂದು ವಾರದೊಳಗಾಗಿ 3ನೇ ಬಾರಿಗೆ ಕೋಡಿ ಬಿದ್ದು, ಐತಿಹಾಸಿಕ ದಾಖಲೆ ನಿರ್ಮಾಣವಾಗಲಿದೆ.

ಜಲಾಶಯ ಕೋಡಿ ಬಿದ್ದಲ್ಲಿ ಒಂದೆಡೆ ರೈತರ ಮುಖದಲ್ಲಿ ಸಂತಸ ಮೂಡಿದರೆ, ಜಲಾಶಯದ ಹಿನ್ನೀರಿನ ಹೊಸದುರ್ಗ ತಾಲೂಕಿನ ರೈತರಿಗೆ ಸಂಕಷ್ಟದ ಪರಿಸ್ಥಿತಿ ಎದುರಾಗಿದೆ.ಎರಡು ವರ್ಷದ ಹಿಂದೆ (2022) ಡ್ಯಾಂ ಕೋಡಿ ಬಿದ್ದಾಗ ಹಿನ್ನೀರಿನ ಕೆಲ ಗ್ರಾಮಗಳಲ್ಲಿ ತೇವಾಂಶ ಹೆಚ್ಚಾಗಿ ಮನೆಗಳು ಬಿರುಕು ಬಿಟ್ಟಿದ್ದವು.

ಇನ್ನೂ ಮಾಡದಕೆರೆ ಹೋಬಳಿಯ ಲಕ್ಕಿಹಳ್ಳಿ, ಮಾದಿಹಳ್ಳಿ, ಅಯ್ಯನಹಳ್ಳಿ, ಬೇವಿನಹಳ್ಳಿ, ಅಂಚೀಬಾರಿಹಟ್ಟಿ, ನಾಗಯ್ಯನಹಟ್ಟಿ, ತಿಮ್ಮಯ್ಯನಹಟ್ಟಿ, ಕೆರೆಕೋಡಿಹಟ್ಟಿ, ಶೀರನಕಟ್ಟೆ, ಕೋಡಿಹಳ್ಳಿಹಟ್ಟಿ, ಪೂಜಾರಹಟ್ಟಿ, ಮಾಳಿಗೆಹಟ್ಟಿ, ಎಂ.ಮಲ್ಲಾಪುರ, ಮತ್ತೋಡು ಹೋಬಳಿಯ ನಾಗತಿಹಳ್ಳಿ, ತಿಪ್ಪೇನಹಳ್ಳಿ, ಅರೇಹಳ್ಳಿ, ಹೊಸೂರು ಭೋವಿಹಟ್ಟಿ, ಹುಣಸೇಕಟ್ಟೆ ಮತ್ತು ಇಂಡೇ ದೇವರಹಟ್ಟಿ ಸೇರಿದಂತೆ ಇನ್ನಿತರ ಗ್ರಾಮಗಳ ಜನರ ರೈತರ ಜಮೀನುಗಳು ಮುಳುಗಿದ್ದವು. ಜಲಾಶಯದಲ್ಲಿ ನೀರು ಮತ್ತಷ್ಟು ಹೆಚ್ಚಾದರೆ, ಈ ಬಾರಿಯೂ ಜಮೀನುಗಳು ಮುಳುಗಬಹುದೆಂಬ ಆತಂಕದಲ್ಲಿದ್ದಾರೆ.

ಜಲಾಶಯದಲ್ಲಿ 130 ಅಡಿ ನೀರು ಸಂಗ್ರಹವಾದರೆ, ಜಲಾಶಯದ ಹಿನ್ನೀರಿನ (ಹೊಸದುರ್ಗ ತಾಲೂಕಿನ) ಅಷ್ಟರ ಮಟ್ಟಿಗೆ ಸಮಸ್ಯೆ ಏನು ಆಗುವುದಿಲ್ಲ. ಆದರೆ, 130 ಅಡಿಗಿಂತ ಹೆಚ್ಚು ದಾಟಿದರೆ, ಜಮೀನುಗಳು ಮುಳುಗಡೆಯಾಗುವುದಲ್ಲದೆ, ಗ್ರಾಮಗಳು ಕೂಡ ಮುಳುಗುವ ಭೀತಿ ಎದುರಾಗುತ್ತದೆ. ಸರ್ಕಾರ ಗಡಿ ಗುರುತು ಮಾಡಿರುವ ಹಿನ್ನೀರು ಪ್ರದೇಶವನ್ನು ದಾಟಿ, ಖಾಸಗಿ ಜಮೀನುಗಳಿಗೆ ನೀರು ಬಂದಿತ್ತು. ಇಂತಹ ಪರಿಸ್ಥಿತಿಯನ್ನು 2022 ರಲ್ಲಿ ಅನುಭವಿಸಿದ್ದೇವೆ. ಜಲಾಶಯದಲ್ಲಿ ನೀರು ಹೆಚ್ಚಾಗುವ ಸಾಧ್ಯತೆಯಿದ್ದು, ತಾಲೂಕು ಆಡಳಿತ ಮತ್ತು ಜಿಲ್ಲಾಡಳಿತ ಮುಂಜಾಗ್ರತಾ ಕ್ರಮವಹಿಸಬೇಕೆಂದು ಲಕ್ಕಿಹಳ್ಳಿ ಗ್ರಾಮದ ಯುವಕ ಚಿಕ್ಕ ಕರಿಯಪ್ಪ ಒತ್ತಾಯಿಸಿದ್ದಾರೆ.






ವಾಣಿವಿಲಾಸ ಸಾಗರ ಜಲಾಶಯದ ನೀರಿನ ಮಟ್ಟ 129 ಅಡಿಗೆ ತಲುಪಿದ್ದು, ಮತ್ತೊಮ್ಮೆ ಕೋಡಿ ಬೀಳುವ ಸಂದರ್ಭ ಸಮೀಪಿಸಿದೆ. ಈಗಾಗಲೇ, ಜಲಾಶಯದ ಹಿನ್ನೀರಿನ ಗ್ರಾಮಗಳಿಗೆ ಭೇಟಿ ನೀಡಿ, ಜನರ ಸಮಸ್ಯೆಗಳನ್ನು ಕೇಳಲಾಗಿದೆ. ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮವಹಿಸಿಕೊಂಡಿದ್ದೇವೆ. ಡ್ಯಾಂ ನಲ್ಲಿ ದಾಖಲೆ ಪ್ರಮಾಣದಲ್ಲಿ ನೀರು ಸಂಗ್ರಹವಾಗಿದ್ದು, ಪೋಷಕರು ತಮ್ಮ ಮಕ್ಕಳನ್ನು ನೀರಿನತ್ತ ಹೋಗದಂತೆ ಎಚ್ಚರವಹಿಸಬೇಕು.

» **ತಿರುಪತಿ ಪಾಟೀಲ್. ತಹಶೀಲ್ದಾರರು, ಹೊಸದುರ್ಗ**

## ಫಾಸ್ಟ್ ನ್ಯೂಸ್

### ಹಿರಿಯೂರು ನಗರಸಭೆ: ಜ.02 ಕೌನ್ಸಿಲ್ ಸಾಮಾನ್ಯ ಸಭೆ

» ಚಿತ್ರದುರ್ಗ

ಹಿರಿಯೂರು ನಗರಸಭಾ ಕಚೇರಿಯ ಕೌನ್ಸಿಲ್ ಸಭಾಂಗಣದಲ್ಲಿ ಇದೇ ಜನವರಿ 02 ರಂದು ಬೆಳಿಗ್ಗೆ 11.30ಕ್ಕೆ ಕೌನ್ಸಿಲ್ ಸಾಮಾನ್ಯ ಸಭೆ ಹಮ್ಮಿಕೊಳ್ಳಲಾಗಿದೆ. ಹಿರಿಯೂರು ನಗರಸಭೆ ಅಧ್ಯಕ್ಷ ಜೆ.ಆರ್.ಅಜಯ್‌ಕುಮಾರ್ (ಅಜ್ಜಪ್ಪ) ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಹಿರಿಯೂರು ನಗರಸಭೆ ಪೌರಾಯುಕ್ತ ಎ.ವಾಸೀಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಪೂರ್ಣ ಅರ್ಜಿ ಪೂರ್ಣಗೊಳಿಸಲು ಜ.05 ರವರೆಗೆ ಅವಕಾಶ

» ಚಿತ್ರದುರ್ಗ

ಭರಮಸಾಗರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ ಅರ್ಜಿ ಪೂರ್ಣಗೊಳಿಸಲು 2025ರ ಜ.05 ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಪ್ರಸ್ತುತ ಅರ್ಜಿ ಸಲ್ಲಿಕೆ ಕಾಲಾವಧಿ ಮುಕ್ತಾಯಗೊಂಡಿದ್ದು, ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 04 ಹಂತಗಳಿದ್ದು, ಮೊದಲನೇ ಹಂತದಲ್ಲಿ ಆನ್‌ಲೈನ್ ತಂತ್ರಾಂಶದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು, ಎರಡನೇ ಹಂತದಲ್ಲಿ ತಮ್ಮ ಭಾವಚಿತ್ರ ಸಹಿ ಅಪ್‌ಲೋಡ್ ಮಾಡುವುದು. ಮೂರನೇ ಹಂತ ತಮ್ಮ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು ಹಾಗೂ ನಾಲ್ಕನೇ ಹಂತ ತಮ್ಮ ಆಧಾರ್ ಸಂಖ್ಯೆ ನಮೂದಿಸಿ ಇ–ಹಸ್ತಾಂಕ್ಷರದೊಂದಿಗೆ ಅರ್ಜಿ ಪೂರ್ಣಗೊಳಿಸಬೇಕಾಗಿರುತ್ತದೆ. ಇದರಲ್ಲಿ ಕೆಲವರು ಮೊದಲನೇ ಹಂತದಲ್ಲಿಯೇ ಅಪ್ಲಿಕೇಶನ್ ಸಕ್ಸಸ್‌ಫುಲ್ ಅಪ್‌ಲೋಡ್ ಎಂಬ ಸಂದೇಶ ಅವರುಗಳ ಮೊಬೈಲ್‌ಗೆ ಸ್ವೀಕೃತವಾಗಿರುವುದರಿಂದ ಅರ್ಜಿ ಪೂರ್ಣಗೊಳಿಸಿರುವುದಿಲ್ಲ.

ಅರ್ಜಿ ಸಲ್ಲಿಸುವ ನಾಲ್ಕು ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2025ರ ಜ.5 ರವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಭರಮಸಾಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆ ತಿಳಿಸಿದ್ದಾರೆ.

### ಕರೇಕಲ್ ಆಂಜನೇಯ ದೇವಸ್ಥಾನ: ಜ.4ರಂದು ಧನುರ್ಮಾಸದ ಪೂಜೆ



» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂನಾಯಕನಹಟ್ಟಿ ರಸ್ತೆಯಲ್ಲಿರುವ ಶ್ರೀಕರೇಕಲ್ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಜ.4ರ ಶನಿವಾರ ಧನುರ್ಮಾಸದ ವಿಶೇಷ ಪೂಜೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಅರ್ಚಕ, ವೇದಬ್ರಹ್ಮ ಸಿ.ಎನ್.ನಾಗಶಯನಗೌತಮ್ ತಿಳಿಸಿದರು.ಅವರು ಈ ಬಗ್ಗೆ ಮಾಹಿತಿ ನೀಡಿ, ಅಂದು ಬೆಳಗ್ಗೆ ಶ್ರೀಸ್ವಾಮಿಗೆ ಅಭಿಷೇಕ, ಅರ್ಚನೆ, ಮಹಾಮಂಗಳಾರತಿ, 9 ಗಂಟೆಗೆ ಬನಶಂಕರಿ ಸ್ತೋತ್ರ ವೃಂದದಿಂದ ವಿಷ್ಣುಸಹಸ್ರನಾಮ ಪಾರಾಯಣ ಹಾಗೂ ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮವಿದ್ದು ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪೂಜೆ ಕಾರ್ಯಗಳಲ್ಲಿ ಪಾಲ್ಗೊಂಡು ಪ್ರಸಾದ ಸ್ವೀಕರಿಸುವಂತೆ ಅವರು ಮನವಿ ಮಾಡಿದ್ದಾರೆ.

# ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನ: ಆಚರಣೆ

» ಚಿತ್ರದುರ್ಗ




ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಸಮಾರಂಭವನ್ನು ಮಾಜಿ ಪ್ರಧಾನಿಗಳಾದ ಡಾ.ಮನಮೋಹನ್ ಸಿಂಗ್ ಅವರ ನಿಧನದ ಶೋಕಾಚರಣೆ ಹಿನ್ನಲೆಯಲ್ಲಿ ಸರಳವಾಗಿ ಹಮ್ಮಿಕೊಳ್ಳಲಾಗಿತ್ತು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಜಿಲ್ಲಾ ವಿಶ್ವಕರ್ಮ ಸಮಾಜದ ಜಿಲ್ಲಾಧ್ಯಕ್ಷ ಕೆ.ಟಿ.ಸುರೇಶಾಚಾರ್ಯ, ವಿಶ್ವಕರ್ಮ ಕಾಳಿಕಾಂಬ ಕಲ್ಯಾಣಮಂಟಪ ಟ್ರಸ್ಟ್ ಅಧ್ಯಕ್ಷ ಎ.ಶಂಕರಾಚಾರ್, ಉಪಾಧ್ಯಕ್ಷ ಬಾಲಬ್ರಹ್ಮಚಾರ್, ಸಮಾಜದ ಮುಖಂಡರಾದ ನಾಗಾರಾಜಾಚಾರ್, ಶಿಲ್ಪಿ ಸುರೇಶ್, ಸುನೀಲ್ ಕುಮಾರ್, ಆನಂದಚಾರ್, ನಾಗೇಂದ್ರಚಾರ್, ಶಿವಣ್ಣಚಾರ್,ಮಂಜುನಾಥಚಾರ್,ಮಲ್ಲಿಕಾರ್ಜುನಚಾರ್ ಸೇರಿದಂತೆ ಮತ್ತಿತರರು ಇದ್ದರು.

## ಕಲೆಗೆ ಜೀವಂತಿಕೆ ತಂದುಕೊಟ್ಟ ಮಹಾನೀಯ ಜಕಣಚಾರಿ



» ಚಳ್ಳಕೆರೆ

ಇಡೀ ವಿಶ್ವದಲ್ಲೇ ಶಿಲ್ಪಕಲೆಗೆ ಜೀವತುಂಬಿದ ಕೀರ್ತಿ ಅಮರಶಿಲ್ಪಿ ಜಕಣಚಾರಿಯವರದ್ದು. ತಮ್ಮದೇಯಾದ ಕಲೆ ಮತ್ತು ವೃತ್ತಿಯ ಮೌಲ್ಯವನ್ನು ಜಗತ್ತೆ ಬೆರಗಾಗುವಂತೆ ತನ್ನ ಕೆತ್ತನೆಯ ಮೂಲಕ ತೋರಿಸಿದ ಮಹಾನ್ ಶಿಲ್ಪಿಅವರು. ಅಮರಶಿಲ್ಪಿ ಜಕಣಚಾರಿ ಜನಮಾನಸದಲ್ಲಿ ಸದಾಕಾಲ ಶಾಶ್ವತವಾಗಿ ನೆಲೆಯೂರಿದ್ದಾರೆಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.


ಪುಟ ↘ 2


## ಪ್ರಮುಖ ಸುದ್ದಿ

### ಹೆಚ್ಚು ಕರ ವಸೂಲಾತಿ ಮಾಡಿ ಪಿಡಿಒಗಳಿಗೆ ಸನ್ಮಾನ

# ಗ್ರಾಮಾಭಿವೃದ್ಧಿಯಿಂದ ಮಾತ್ರ ದೇಶಾಭಿವೃದ್ಧಿ ಸಾಧ್ಯ: ತಾಪಂ ಇಒ

» ಚಿತ್ರದುರ್ಗ





ಗ್ರಾಮದ ಅಭಿವೃದ್ಧಿಯಿಂದ ಮಾತ್ರ ದೇಶದ ಅಭಿವೃದ್ಧಿಯಾಗಲು ಸಾಧ್ಯ ಎಂದು ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ. ರವಿಕುಮಾರ್ ಹೇಳಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಹೆಚ್ಚು ಕರ ವಸೂಲಾತಿ ಮಾಡಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿಬ್ಬಂದಿಗೆ ಸನ್ಮಾನಿಸಿ ಅವರು ಮಾತನಾಡಿದರು.

ಗ್ರಾಮದ ಅಭಿವೃದ್ಧಿಯಿಂದ ಮಾತ್ರ ದೇಶದ ಅಭಿವೃದ್ಧಿಯಾಗಲು ಸಾಧ್ಯ. ಹಾಗಾಗಿ ಸರ್ಕಾರದ ಕಾರ್ಯಕ್ರಮಗಳು ಮತ್ತು ಯೋಜನೆಗಳ ಉತ್ತಮ ಅನುಷ್ಠಾನಕ್ಕೆ ಈ ಹೊಸ ವರ್ಷದ ದಿನ ಕಟಿಬದ್ಧರಾಗಬೇಕು ಎಂದು ತಿಳಿಸಿದ ಅವರು, ಉತ್ತಮ ಕರ ವಸೂಲಿ ಮಾಡಿರುವ ಗ್ರಾಮ ಪಂಚಾಯಿತಿಳಂತೆ ಇತರೆ ಗ್ರಾಮ ಪಂಚಾಯಿತಿಗಳೂ ಉತ್ತಮ ಸಾಧನೆ ಮಾಡಬೇಕು ಎಂದು ಹೇಳಿದರು.

ಗ್ರಾಮ ಪಂಚಾಯಿತಿ ತೆರಿಗೆಯಿಂದ ಸಂಗ್ರಹಿಸುವ ಆದಾಯವನ್ನು ತನ್ನ ಆಡಳಿತ ವ್ಯವಸ್ಥೆಯಲ್ಲಿ ಕೆಲಸ ನಿರ್ವಹಿಸುವ ನೌಕರರ ಸಂಬಳ, ಗ್ರಾಮದ ಅಭಿವೃದ್ಧಿಗೆ ಮತ್ತು ಅಲ್ಲಿನ ನಿವಾಸಿಗಳ ಮೂಲಭೂತ ಸೇವೆ ಒದಗಿಸಲು ಬಳಸಲಾಗುತ್ತದೆ. ಈ ನಿಟ್ಟಿನಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರ ಸೂಚನೆಯಂತೆ ಚಿತ್ರದುರ್ಗ ತಾಲ್ಲೂಕಿನ 38 ಗ್ರಾಮ ಪಂಚಾಯಿತಿಗಳಲ್ಲಿ ಎಲ್ಲಾ ಸಿಬ್ಬಂದಿಗಳೂ ಕಳೆದ ಒಂದು ತಿಂಗಳಿಂದ ಅಭಿಯಾನದ ರೂಪದಲ್ಲಿ ಕರ ವಸೂಲಾತಿ ಆಂದೋಲನ ಹಮ್ಮಿಕೊಂಡಿದ್ದರಿಂದ ಪ್ರಸಕ್ತ ಸಾಲಿನಲ್ಲಿ ಚಿತ್ರದುರ್ಗ ತಾಲ್ಲೂಕಿನ ರೂ. 12,44,11,412/–ಗಳ ಒಟ್ಟು ಬೇಡಿಕೆಯಲ್ಲಿ ರೂ.6,68,06,208/– ಕರ ವಸೂಲಿಯಾಗಿ ಡಿಸೆಂಬರ್ ಅಂತ್ಯಕ್ಕೆ ಶೇ.53.70 ಕರ ವಸೂಲಾತಿಯಾಗಿದೆ ಎಂದು ಹೇಳಿದರು.


ಜಿ.ಆರ್.ಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಆನಂದ್ ಮಾತನಾಡಿ, ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಕಾರ್ಯವೈಖರಿ ಹಾಗೂ ದಿನಂಪ್ರತಿ ಜನರ ಮನವೊಲಿಸುವಿಕೆಯಿಂದ, ಅಲ್ಲದೆ ಗ್ರಾಮ ಪಂಚಾಯತಿಯ ಆಡಳಿತ ಸದಸ್ಯರ ಸಹಕಾರದಿಂದಾಗಿ ಉತ್ತಮ ಸಾಧನೆ ಮಾಡಲು ಸಾಧ್ಯವಾಯಿತು ಎಂದರು.

ಇದೇ ಸಂದರ್ಭದಲ್ಲಿ ಚಿತ್ರದುರ್ಗ ತಾಲ್ಲೂಕಿನಲ್ಲಿ ಅತಿ ಹೆಚ್ಚು ಕರ ವಸೂಲಿ ಮಾಡಿರುವ ಆಲಗಟ್ಟ (ಶೇ.82.98), ಇಂಗಳದಾಳ್ (ಶೇ.87.29), ಜಿ.ಆರ್.ಹಳ್ಳಿ(ಶೇ.84.47) ಮತ್ತು ಮಾಡನಾಯಕನಹಳ್ಳಿ (ಶೇ.86.28) ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಹಾಗೂ ಪ್ರಮುಖವಾಗಿ ಬಿಲ್ ಕಲೆಕ್ಟರ್‌ಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಸಹಾಯಕ ಲೆಕ್ಕಾಧಿಕಾರಿ ಕೆಂಚಪ್ಪ, ತಾಲ್ಲೂಕು ಯೋಜನಾಧಿಕಾರಿ ರಾಘವೇಂದ್ರ, ನರೇಗಾ ಮತ್ತು ಪಂಚಾಯತ್ ರಾಜ್ ಸಹಾಯಕ ನಿರ್ದೇಶಕರಾದ ಹೆಚ್.ಯರ್ರಿಸ್ವಾಮಿ ಮತ್ತು ರೂಪಾ ಕುಮಾರಿ, ವ್ಯವಸ್ಥಾಪಕ ಇರ್ಫಾನ್, ಪಿಡಿಒ ಮಹಾಲಕ್ಷ್ಮಿ, ನಾಸೀರ್, ಎಂಐಎಸ್ ಸಂಯೋಜಕ ಉಮೇಶ್, ಐಇಸಿ ಸಂಯೋಜಕ ಸತ್ಯನಾರಾಯಣ, ಚಿತ್ರದುರ್ಗ ತಾಲ್ಲೂಕಿನ ಪಿಡಿಒ, ಕಾರ್ಯದರ್ಶಿ, ದ್ವಿತೀಯ ದರ್ಜೆ ಸಹಾಯಕರು, ಬಿಲ್ ಕಲೆಕ್ಟರ್‌ಗಳು ಹಾಗೂ ತಾಲ್ಲೂಕು ಪಂಚಾಯಿತಿ ಸಿಬ್ಬಂದಿ ಇದ್ದರು.

ಫಾಸ್ಟ್ ನ್ಯೂಸ್

## ಇಂದು ಅಯ್ಯಪ್ಪಸ್ವಾಮಿ ಪಡಿಪೂಜೆ ಕಾರ್ಯಕ್ರಮ



» **ಚಳ್ಳಕೆರೆ**

ನಗರದ ಹರಿಹರಸುತ ಸೇವಾಸಮಿತಿ ಹಾಗೂ ಸಮಸ್ತ ಅಯ್ಯಪ್ಪಸ್ವಾಮಿ ಭಕ್ತರ ಸಹಯೋಗದಲ್ಲಿ ಜ.2ರ ಗುರುವಾರ ಸಂಜೆ 6ಗಂಟೆಗೆ ವಿಶೇಷ ಪಡಿಪೂಜೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ವ್ಯವಸ್ಥಾಪಕರಲ್ಲಿ ಒಬ್ಬರಾದ ಎ.ಕೀರ್ತಿಪ್ರಸಾದ್, ಮಂಜುನಾಥಕಂಚಿ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ನಾಲ್ಕನೇ ವರ್ಷದ ವಿಶೇಷ ಪಡಿಪೂಜೆ ಕಾರ್ಯಕ್ರಮವಾಗಿದ್ದು, ಪೂಜ್ಯಸ್ವಾಮೀಜಿಯವರಾದ ಏಜೆಂಟ್‌ಜಗ್ಗುಸ್ವಾಮಿ, ರೇಣುಕಾಸ್ವಾಮಿ(ಬಾಸ್) ಶಿಷ್ಯವೃಂದ ಸಹಕಾರದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಶಬರಿಮಲೆ ಸನ್ನಿಧಾನದ ಅರ್ಚಕರಾದ ಆನಂದನಂಬೂದರಿ, ದೇಶ, ವಿದೇಶಗಳಲ್ಲಿ ಅಯ್ಯಪ್ಪಸ್ವಾಮಿಯ ಹಾಡು, ಭಜನೆಗಳ ಹಾಡುವ ಖ್ಯಾತ ವೀರಮಣಿರಾಜು ಕಾರ್ಯಕ್ರಮಕ್ಕೆ ಆಗಮಿಸುವರು. ಜ.2ರ ಗುರುವಾರ ಬೆಳಗ್ಗೆ 5ಗಂಟೆಗೆ ಮಹಾಗಣಪತಿಹೋಮ, 6ಕ್ಕೆ ನವಗ್ರಹಹೋಮ, 7ಕ್ಕೆ ಗೋಪೂಜೆ ಮತ್ತು ತುಪ್ಪಾಭಿಷೇಕ, ಅಷ್ಟಾಭಿಷೇಕ, ಬೆಳಗ್ಗೆ 10ಕ್ಕೆ ಸರ್ವೈಶ್ವರ್ಯಪೂಜೆ, ಸಂಜೆ 6ಕ್ಕೆ ಪಡಿಪೂಜೆ, ರಾತ್ರಿ 8ಕ್ಕ ಪುಷ್ಪಾಭಿಷೇಕ, ರಾತ್ರಿ 11ಕ್ಕೆ ಹರಿವರಾಸನಂ ಕಾರ್ಯಕ್ರಮ ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪ್ರಸಾದ ಸ್ವೀಕರಿಸುವಂತೆ ಮನವಿ ಮಾಡಲಾಗಿದೆ.

## ಕಲೆಗೆ ಜೀವಂತಿಕೆ ತಂದುಕೊಟ್ಟ ಮಹಾನೀಯ ಜಕಣಚಾರಿ

» **ಮೊದಲ ಪುಟದಿಂದ**

ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಅಮರಶಿಲ್ಪಿ ಜಕಣಚಾರಿ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ರಾಜ್ಯ ಸರ್ಕಾರ ಅಮರಶಿಲ್ಪಿ ಜಕಣಚಾರಿಯವರ ಕೊಡುಗೆಗಳು ಸಾರ್ವಜನಿಕರಿಗೂ ಸುಲಭವಾಗಿ ಅರ್ಥವಾಗಬೇಕೆಂಬುವ ದೃಷ್ಠಿಯಿಂದ ಪ್ರತಿವರ್ಷ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮೂಲಕ ಮಹಾನೀಯರು ನಾಡಿಗೆ ನೀಡಿದ ಕೊಡುಗೆಯನ್ನು ಸ್ಮರಿಸಲಾಗುತ್ತಿದೆ ಎಂದರು. ವಿಶ್ವಕರ್ಮ ಸಮಾಜದ ಅಧ್ಯಕ್ಷ ಚಂದ್ರಶೇಖರ್‌ಚಾರ್ ಮಾತನಾಡಿ, ಪ್ರತಿವರ್ಷವೂ ನಾವೆಲ್ಲರೂ ಸೇರಿ ಅಮರಶಿಲ್ಪಿ ಜಕಣಚಾರಿಯವರ ಜಯಂತಿ ಕಾರ್ಯಕ್ರಮವನ್ನು ಸಂತೋಷದಿಂದ ಆಚರಣೆ ಮಾಡುತ್ತಾ ಬಂದಿದ್ದೇವೆ. ಅಮರಶಿಲ್ಪಿ ಜಕಣಚಾರಿಯವರು ತಮ್ಮದೇಯಾದ ಕಾರ್ಯದ ಮೂಲಕ ಶಿಲ್ಪಕಲೆಗೆ ವಿಶ್ವಮನ್ನಣೆಯನ್ನು ತಂದುಕೊಟ್ಟವರು ಎಂದರು. ಕಾರ್ಯಕ್ರಮದಲ್ಲಿ ಮಾಜಿ ಅಧ್ಯಕ್ಷ ವೆಂಕಟೇಶ್‌ಚಾರ್, ಕೆಪಿಸಿಸಿ ಕುಶಲಕರ್ಮಿ ಪರಿಷತ್ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಉಪಾಧ್ಯಕ್ಷ ನಾಗರಾಜಚಾರ್, ರಾಮು, ಸಿ.ಇ.ಪ್ರಸನ್ನಚಾರ್, ಬ್ರಹ್ಮಾಚಾರಿ, ಶ್ರೀನಿವಾಸ್‌ಚಾರ್, ಸರಸ್ವತಮ್ಮ, ಉಮಾದೇವಿ, ರಾಜೇಶ್ವರಿ, ಕಮಲಮ್ಮ, ಮೌನೇಶ್‌ಚಾರಿ, ವಸಂತಚಾರಿ, ಡಿ.ಶ್ರೀನಿವಾಸ್, ಮಂಜುನಾಥ, ಪ್ರಕಾಶ್ ಉಪಸ್ಥಿತರಿದ್ದರು.

## ಗೋಸಿಕೆರೆಯ ಊರಮಾರಮ್ಮದೇವಿ ಜಾತ್ರೆ ಜ.7ರಂದು: ಶಾಸಕ ಟಿ.ರಘುಮೂರ್ತಿ ಉಪಸ್ಥಿತಿ

» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಗೋಸಿಕೆರೆ ಗ್ರಾಮದಲ್ಲಿ ಶ್ರೀಊರದೇವಿ ಮಾರಮ್ಮದೇವಿಯ ಜಾತ್ರೆ ಜ.7ರಿಂದ10ರ ತನಕ ನಡೆಯಲಿದ್ದು, ಸುತ್ತಮುತ್ತಲ ಭಕ್ತರು ಜಾತ್ರೆಯಲ್ಲಿ ಭಾಗವಹಿಸುವಂತೆ ದೇವಸ್ಥಾನದ ಆಡಳಿತ ಮಂಡಳಿ ಮನವಿ ಮಾಡಿದೆ. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಜಾತ್ರಾ ಉತ್ಸವಕ್ಕೆ ಚಾಲನೆ ನೀಡಲಿದ್ಧಾರೆ. ಈ ಬಗ್ಗೆ ಮಾಹಿತಿ ನೀಡಿದ ಆಡಳಿತಮಂಡಳಿ ನಿರ್ದೇಶಕರು, ಪ್ರತಿಐದು ವರ್ಷಕ್ಕೊಮ್ಮೆ ಗ್ರಾಮದಲ್ಲಿ ಊರಮಾರಮ್ಮದೇವಿ ಜಾತ್ರೆ ನಡೆಯುವುದು. ಕಳೆದ 2020ರಲ್ಲಿ ಜಾತ್ರೆ ನಡೆದಿದ್ದು, ಈಗ ಪುನಃ 2025ರಲ್ಲಿ ನಡೆಸಲು ಭಕ್ತಾಧಿಗಳು ನಿರ್ಧರಿಸಿದ್ದಾರೆ. ಜ.7ರ ಮಂಗಳವಾರ ಗ್ರಾಮ ದೇವತೆ ಪ್ರತಿಷ್ಠಾಪನಾ ಕಾರ್ಯಕ್ರಮ ನಡೆಯಲಿದೆ, ಊರಿನ ಪ್ರಮುಖ ರಸ್ತೆಯಲ್ಲಿ ಊರಮಾರಮ್ಮದೇವಿಯ ಮೆರವಣಿಗೆ ನಡೆಸಲಾಗುವುದು. ಜ.8ರ ಬುಧವಾರ ಶ್ರೀದೇವಿಗೆ ಆರತಿ ಬೆಳಗುವ ಕಾರ್ಯಕ್ರಮ, ಜ.9ರ ಗುರುವಾರ ಮಧ್ಯಾಹ್ನ 3ಕ್ಕೆ ಗಾವು, ಸಿಡಿ ಮತ್ತು ದೇವಿಯ ವಿಸರ್ಜನೆ ಕಾರ್ಯಕ್ರಮವಿದೆ. ಜ.10ರ ಶುಕ್ರವಾರ ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ರಾತ್ರಿ 8ಕ್ಕೆ ಗೊಂಬೆ ನಾಟಕ ಕಾರ್ಯಕ್ರಮವಿರುತ್ತದೆ.

# 2017 ರಿಂದ 2023 ಅವಧಿಯ ಅಭಿವೃದ್ಧಿ ಹಾಗೂ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳು ಪ್ರಕಟ

» **ಚಿತ್ರದುರ್ಗ**

ರಾಜ್ಯ ಸರ್ಕಾರ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಕ್ಷೇತ್ರಗಳಲ್ಲಿ ವಿಶಿಷ್ಠ ಸಾಧನೆ ಮಾಡಿದ ಪತ್ರಕರ್ತರಿಗೆ ನೀಡುವ 2017 ರಿಂದ 2023ರ ಕ್ಯಾಲೆಂಡರ್ ವರ್ಷಗಳ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ಪ್ರಕಟಿಸಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ ನಿಂಬಾಳ್ಕರ್ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಪ್ರಶಸ್ತಿಗಳನ್ನು ಸರ್ಕಾರವು 2001ನೇ ಸಾಲಿನಿಂದ ಸ್ಥಾಪಿಸಿದ್ದು 2016 ರವರೆಗೆ ನಾಡಿನ 32 ಜನ ಹಿರಿಯ ಪತ್ರಕರ್ತರು ಈ ಎರಡೂ ಪ್ರಶಸ್ತಿಗಳನ್ನು ಸ್ವೀಕರಿಸಿದ್ದಾರೆ. ಕೋವಿಡ್ ಹಾಗೂ ಇತರೆ ಕಾರಣಗಳಿಂದ ವಿಳಂಬವಾಗಿದ್ದ 2017ರಿಂದ 2023ರ ವರೆಗಿನ ಏಳು ವರ್ಷಗಳ ಅವಧಿಯ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರನ್ನು ಹಿರಿಯ ಪತ್ರಕರ್ತರಾದ ಸನತ್ ಕುಮಾರ್ ಬೆಳಗಲಿ ಹಾಗೂ ಕೆ.ಶಿವಕುಮಾರ್ ಅವರಿದ್ದ ಸಮಿತಿಯು ಆಯ್ಕೆ ಮಾಡಿದೆ. ಪ್ರಶಸ್ತಿಯು ತಲಾ ಒಂದು ಲಕ್ಷ ರೂಪಾಯಿ ನಗದು, ಸ್ಮರಣಿಕೆ, ಅಭಿನಂದನಾ ಪತ್ರ ಒಳಗೊಂಡಿರುತ್ತದೆ.

**2017ರಿಂದ 2023ರ ವರೆಗಿನ ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪುರಸ್ಕೃತರ ವಿವರ:**

- **ವಿಜಯಲಕ್ಷ್ಮಿ ಶಿಬರೂರು** (2017) : ಮೂಲತ: ದಕ್ಷಿಣ ಕನ್ನಡ ಜಿಲ್ಲೆಯ ಶಿಬರೂರು ಗ್ರಾಮದವರಾದ ವಿಜಯಲಕ್ಷ್ಮಿ ಅವರು, ಕಳೆದ ಸುಮಾರು 25 ವರ್ಷಗಳಿಂದ ನಾಡಿನ ವಿವಿಧ ಮಾಧ್ಯಮಗಳಿಗೆ ಸೇವೆ ಸಲ್ಲಿಸುತ್ತಿದ್ದಾರೆ. ಅರಣ್ಯ ಸಂರಕ್ಷಣೆ, ಅಪಾಯಕಾರಿ ಆಹಾರ ಪದಾರ್ಥಗಳು, ಪ್ಲಾಸ್ಟಿಕ್ ಅಪಾಯಗಳು ಮತ್ತಿತರ ಜಾಗೃತಿ ಮೂಡಿಸುವ ವರದಿಗಳನ್ನು ಎಲೆಕ್ಟ್ರಾನಿಕ್ ಹಾಗೂ ಸಾಮಾಜಿಕ ಮಾಧ್ಯಮಗಳ ಮೂಲಕ ಪರಿಣಾಮಕಾರಿಯಾಗಿ ಬಿತ್ತರಿಸಿದ್ದಾರೆ. ಪರಿಸರ ಜಾಗೃತಿಯ ವರದಿಗಳನ್ನು ಪ್ರಕಟಿಸಿದ್ದಾರೆ.
- **ಬಿ.ಎಂ.ಟಿ ರಾಜೀವ್ : (2018):** ಮೂಲತ: ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನ ಬೆನವಾರ ಗ್ರಾಮದವರು, ಉಪ ಅರಣ್ಯ ಸಂರಕ್ಷಣಾಧಿಕಾರಿಯಾಗಿ ಭಾರತೀಯ ಅರಣ್ಯ ಸೇವೆಯಿಂದ 2006ರಲ್ಲಿ ನಿವೃತ್ತಿ ಹೊಂದಿದ್ದಾರೆ. 1985 ರಿಂದ ವನ್ಯಜೀವಿಗಳು, ಅರಣ್ಯ ಮತ್ತು ಪರಿಸರ ಸಂರಕ್ಷಣೆ ಕುರಿತು ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಲೇಖನ, ಪ್ರಬಂಧಗಳನ್ನು ಬರೆಯುತ್ತಿದ್ದಾರೆ. ಅರಣ್ಯ/ವನ್ಯಜೀವಿ/ಪರಿಸರದಿಂದ ಮನುಕುಲಕ್ಕಿರುವ ಅನುಕೂಲಗಳು, ಅವಶ್ಯಕತೆಗಳ ಬಗ್ಗೆ ಲೇಖನಗಳನ್ನು ಬರೆದಿದ್ದಾರೆ. ಭಾರತೀಯ ವನ್ಯಪ್ರಾಣಿಗಳ ಕೈಪಿಡಿ, ಪರಿಸರ ಮಾಲಿನ್ಯ ಮತ್ತು ವಾಯುಗುಣ ಬದಲಾವಣೆ ಕುರಿತು ಒಟ್ಟು 6 ಪುಸ್ತಕಗಳನ್ನು ಪ್ರಕಟಿಸಿದ್ದಾರೆ.
- **ವಿನೋದಕುಮಾರ್ ಬಿ. ನಾಯ್ಕ: (2019) :** ಮೂಲತ: ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಗುಬ್ಬಿಹಳ್ಳಿ ಗ್ರಾಮದವರು. ಏಷಿಯಾನೆಟ್ ಸುವರ್ಣ ನ್ಯೂಸ್ ಸಂಸ್ಥೆಯಲ್ಲಿ ವಿಶೇಷ ಯೋಜನೆಗಳ ವಿಭಾಗದ ಸಂಪಾದಕರಾಗಿರುವ ಇವರು ವಿವಿಧ ಮಾಧ್ಯಮಗಳಲ್ಲಿ ಸುಮಾರು 23 ವರ್ಷಗಳ ಕಾಲ ವನ್ಯಜೀವಿ ಹಾಗೂ ಪರಿಸರ ಕುರಿತು ಅನೇಕ ಪರಿಣಾಮಕಾರಿ ವರದಿಗಳನ್ನು ಮಾಡಿದ್ದಾರೆ. ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಾದೇಶಿಕ ಮಾಧ್ಯಮಗಳಲ್ಲಿ ಮೊದಲ ಬಾರಿಗೆ ವನ್ಯಜೀವಿ ಸಂರಕ್ಷಣಾ ಅಭಿಯಾನಗಳನ್ನು ಹಮ್ಮಿಕೊಂಡು ಕಾಡಂಚಿನ ಗ್ರಾಮಗಳಲ್ಲಿ ಮಾನವ ವನ್ಯಜೀವಿ ಸಂಘರ್ಷ ಕಡಿಮೆ ಮಾಡುವ ನಿಟ್ಟಿನಲ್ಲಿ ಶ್ರಮಿಸುತ್ತಿದ್ದಾರೆ. 'ಜಂಗಲ್ ಡೈರಿ' ಕೃತಿ ಪ್ರಕಟಿಸಿದ್ದಾರೆ.
- **ಮಾಲತೇಶ ಅಂಗೂರ (2020):** ಹಾವೇರಿ ಜಿಲ್ಲೆಯ ಮಾಲತೇಶ ಗದಿಗೆಪ್ಪ ಅಂಗೂರ ಅವರು ಸುಮಾರು 34 ವರ್ಷಗಳಿಂದ ಪತ್ರಿಕೋದ್ಯಮದಲ್ಲಿದ್ದಾರೆ. ಕಳೆದ 18 ವರ್ಷಗಳಿಂದ ಕೌರವ ಕನ್ನಡ ದಿನಪತ್ರಿಕೆಯ ಮುಖ್ಯ ವರದಿಗಾರರಾಗಿ ಪರಿಸರಕ್ಕೆ ಸಂಬಂಧಿಸಿದಂತೆ ವನ್ಯಜೀವಿಗಳು, ಕೆರೆಕಟ್ಟೆಗಳು, ಪ್ರಾಣಿಪಕ್ಷಿಗಳು, ಕೀಟಗಳು, ಸಸ್ಯಗಳು, ನಿಸರ್ಗ, ಗುಡ್ಡ ಗಹ್ವರಗಳು, ಅತಿವೃಷ್ಟಿ ಅನಾವೃಷ್ಠಿ ಸೇರಿದಂತೆ ವಿವಿಧ ಪರಿಸರ ಜಾಗೃತಿಯ ವರದಿಗಳನ್ನು ಪ್ರಕಟಿಸಿದ್ದಾರೆ. 'ಕಾಡು–ಮೇಡು' ಕೃತಿ ಪ್ರಕಟವಾಗಿದೆ.
- **ಸುಧೀರ್ ಶೆಟ್ಟಿ (2021):** ಉಡುಪಿ ಜಿಲ್ಲೆಯ ಪಾದೆಬೆಟ್ಟು ಗ್ರಾಮದವರಾದ ಇವರು ಮುಂಬೈನಲ್ಲಿ ಫೊಟೋ ಜರ್ನಲಿಸಂ ಪದವಿ ಪಡೆದಿದ್ದಾರೆ. ಅರಣ್ಯ, ವನ್ಯಜೀವಿ, ನದಿ ಮತ್ತು ನೀರಿನ ಮೂಲಗಳ ಸಂರಕ್ಷಣೆ, ಬಂಡೀಪುರ ಅರಣ್ಯದ ಪ್ರಾಣಿಗಳ ಪ್ರಾಣ ರಕ್ಷಣೆ, ಬೆಂಗಳೂರಿನ ಕೆರೆಗಳ ನೀರು ತಮಿಳುನಾಡಿಗೆ ಹರಿದುಹೋಗಿ ಅಲ್ಲಿ ಸಂಸ್ಕರಣೆಗೊಂಡು ಕೃಷಿಗೆ ಬಳಕೆಯಾಗುತ್ತಿರುವ ಬಗ್ಗೆ ಸೆರೆಹಿಡಿದ ಛಾಯಾಚಿತ್ರಗಳು ರಾಜ್ಯದಲ್ಲಿ ಚರ್ಚೆ ಉಂಟುಮಾಡಿದ್ದವು. ಗದಗ ಜಿಲ್ಲೆಯ ಕಪ್ಪತ್ತಗುಡ್ಡದ ಸಂರಕ್ಷಣೆ ಸಾಕ್ಷ್ಯಚಿತ್ರ ನಿರ್ಮಿಸಿದ್ದಾರೆ. ಕಪ್ಪತ್ತಗುಡ್ಡ ಸಂರಕ್ಷಣೆಗೆ ಗದುಗಿನ ಡಾ:ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು ಹಾಗೂ ಎಸ್. ಆರ್.ಹಿರೇಮಠ ಅವರ ಹೋರಾಟದ ಸಂದರ್ಭದಲ್ಲಿ ಸಾಕ್ಷ್ಯಚಿತ್ರ ಪ್ರದರ್ಶಿಸಿದ್ದರು. ಮಹದಾಯಿ ತಿರುವು ಯೋಜನೆ, ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆ, ಸಂಡೂರಿನ ಅಕ್ರಮ ಗಣಿಗಾರಿಕೆ ಮತ್ತಿತರ ವಿಷಯಗಳ ಕುರಿತು ಇವರ ಛಾಯಾಚಿತ್ರಗಳು ಪ್ರದರ್ಶನಗೊಂಡಿವೆ.
- **ಮಲ್ಲಿಕಾರ್ಜುನ ಹೊಸಪಾಳ್ಯ (2022) :** ಮಲ್ಲಿಕಾರ್ಜುನ ಹೊಸಪಾಳ್ಯ ಅವರು ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ಹೊಸಪಾಳ್ಯ ಗ್ರಾಮದವರು. ಪತ್ರಿಕೋದ್ಯಮ ಸ್ನಾತಕೋತ್ತರ ಪದವಿಯಲ್ಲಿ ಮೊದಲ ರಾಂಕ್ ನೊಂದಿಗೆ ಎರಡು ಚಿನ್ನದ ಪದಕ ಮತ್ತು ಪದವಿಯಲ್ಲಿ ಕನ್ನಡ ವಿಷಯದಲ್ಲಿ ಹೆಚ್ಚಿನ ಅಂಕಗಳಿಕೆಗಾಗಿ ಚಿನ್ನದ ಪದಕ ಪಡೆದಿದ್ದಾರೆ. ದೇಸಿ ತಳಿ, ನಾಟಿ ಬೀಜಗಳ ಸಂರಕ್ಷಣೆ ಕುರಿತು ವಿಶೇಷ ಆಸಕ್ತಿ, ಜಲಸಂರಕ್ಷಣೆ, ಸುಸ್ಥಿರ ಕೃಷಿ, ಸಿರಿಧಾನ್ಯ ಚಟುವಟಿಕೆಗಳಿಗೆ ಬೆಂಬಲ. ಜಲಜಾಗೃತಿಗಾಗಿ ಕಾರ್ಯಕ್ರಮ ಸಂಘಟನೆ. ಪಾರಂಪರಿಕ ಜಲನಿಧಿಗಳಾದ ತಲಪರಿಗೆ ಬಗ್ಗೆ ಅಧ್ಯಯನ, ಪುನರುಜ್ಜೀವನಕ್ಕಾಗಿ ಶ್ರಮಿಸುತ್ತಿದ್ದಾರೆ. ಕಳೆದ ಎರಡು ದಶಕಗಳಿಂದ ವಿವಿಧ ಪತ್ರಿಕೆಗಳಲ್ಲಿ ಹವ್ಯಾಸಿ ಬರಹಗಾರರಾಗಿ ಕೃಷಿ ವಿಚಾರಗಳ ಬರವಣಿಗೆ ಮಾಡುತ್ತಿದ್ದಾರೆ. ನೆಟ್ಟರಾಗಿ, ತಲಪರಿಗೆ, ನಶಿಸುತ್ತಿರುವ ನೀರಿನ ಜ್ಞಾನ,ಕರ್ನಾಟಕದ ಕೃಷಿ ಆಚರಣೆಗಳು ಸೇರಿ ಒಟ್ಟು 14 ಕೃತಿಗಳು ಪ್ರಕಟವಾಗಿವೆ.
- **ಆರ್.ಮಂಜುನಾಥ್ (ಕೆರೆ ಮಂಜು) (2023) :** ಬೆಂಗಳೂರಿನವರಾಗಿರುವ ಆರ್.ಮಂಜುನಾಥ್ ಅವರು, 1995ರಿಂದ ವಿವಿಧ ಮಾಧ್ಯಮಗಳಲ್ಲಿ ಸೇವೆ ಸಲ್ಲಿಸಿರುವ ಇವರು, ಪ್ರಸ್ತುತ ಪ್ರಜಾವಾಣಿಯಲ್ಲಿ ಹಿರಿಯ ವರದಿಗಾರನಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಬೆಂಗಳೂರಿನ ಕೆರೆಗಳ ಬಗ್ಗೆ 'ನಮ್ಮೂರ್ ಕೆರೆ'ಎಂಬ ಲೇಖನ ಮಾಲಿಕೆ (2008). ಅರ್ಕಾವತಿ ನದಿ ಪುನಶ್ಚೇತನ, ಧಾರವಾಡ ಕೆರೆಗಳ ಅಭಿವೃದ್ಧಿ, ಬೆಂಗಳೂರಿನಲ್ಲಿರುವ ರಾಜಕಾಲುವೆಗಳ ಒತ್ತುವರಿಯಿಂದ ಮಳೆಗಾಲದಲ್ಲಿ ನೀರು ಬಡಾವಣೆಗಳಿಗೆ ಹರಿಯುತ್ತಿದೆ. ಎಲ್ಲೆಲ್ಲಿ ಎಷ್ಟೆಷ್ಟು ರಾಜಕಾಲುವೆ ಒತ್ತುವರಿಯಾಗಿದೆ ಎಂಬುದನ್ನು ನಕ್ಷೆ ಸಹಿತ ಮಾಹಿತಿಯ ಲೇಖನಗಳು ಸೇರಿ ಕೆರೆಗಳ ರಕ್ಷಣೆ ಬಗ್ಗೆ ಪರಿಣಾಮಕಾರಿ ಲೇಖನಗಳನ್ನು ಪ್ರಕಟಿಸಿದ್ದಾರೆ.

**2017ರಿಂದ 2023 ರವರೆಗಿನ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಪುರಸ್ಕೃತರ ವಿವರ**

- **ಚೀ.ಜ.ರಾಜೀವ್** (2017) : ಚಿಕ್ಕಮಗ ಳೂರು ಜಿಲ್ಲೆ ಅಜ್ಜಂಪುರ ತಾಲ್ಲೂಕು ಚೀರನಹಳ್ಳಿ ಗ್ರಾಮದವರು. ಪ್ರಸ್ತುತ ಮೈಸೂರಿನಲ್ಲಿ ನೆಲೆಸಿದ್ದಾರೆ. 1999ರಿಂದ 2001ರವರೆಗೆ ಉದಯವಾಣಿ ದಿನಪತ್ರಿಕೆಯಲ್ಲಿ, 2001 ರಿಂದ ಇಲ್ಲಿಯವರೆಗೆ ವಿಜಯ ಕರ್ನಾಟಕ ದಿನಪತ್ರಿಕೆಯ ಸುದ್ದಿ ಸಂಪಾದಕರಾಗಿ ಬೆಂಗಳೂರಿನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಕೃಷಿ, ಶಿಕ್ಷಣ, ಪರಂಪರೆ, ಮತ್ತಿತರ ಕ್ಷೇತ್ರಗಳ ಸವಾಲುಗಳಿಗೆ ಕನ್ನಡಿ ಹಿಡಿಯುವ ಅಭ್ಯುದಯ ಪತ್ರಿಕೋದ್ಯಮಕ್ಕೆ ಉದಾಹರಣೆಯಾಗುವಂತಹ ವರದಿ ಅಂಕಣಗಳನ್ನು ನಿರಂತರವಾಗಿ ಪ್ರಕಟಿಸುತ್ತಿದ್ದಾರೆ.
- **ದೇವಯ್ಯ ಗುತ್ತೇದಾರ್ (2018):** ಮೂಲತ: ಕಲಬುರಗಿ ಜಿಲ್ಲೆ ಅಫಜಲಪುರ ತಾಲ್ಲೂಕು ಭೈರಾಮಡಗಿ ಗ್ರಾಮದವರು. 2004ರಿಂದ ಉಷಾಕಿರಣ, ಪ್ರಜಾವಾಣಿಯಲ್ಲಿ ಸೇವೆ ಸಲ್ಲಿಸಿ ಪ್ರಸ್ತುತ ವಿಜಯಕರ್ನಾಟಕ ದಿನಪತ್ರಿಕೆಯ ಕಲಬುರಗಿ ಆವೃತ್ತಿಯ ಸ್ಥಾನಿಕ ಸಂಪಾದಕರಾಗಿದ್ದಾರೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿ, ಮಾನವ ಅಭಿವೃದ್ಧಿಯಲ್ಲಿ ಉತ್ತರ ಕರ್ನಾಟಕದ ತಾಲ್ಲೂಕುಗಳ ಪರಿಸ್ಥಿತಿ, ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಬಡತನ ನಿವಾರಣೆ, ಶಿಶುಮರಣ ತಡೆ ಸೇರಿದಂತೆ ಶಿಕ್ಷಣ, ಆರೋಗ್ಯ, ಅಭಿವೃದ್ಧಿ ಕುರಿತ ಅನೇಕ ವಿಶ್ಲೇಷಣಾತ್ಮಕ ಲೇಖನಗಳು, ವರದಿಗಳನ್ನು ಪ್ರಕಟಿಸಿದ್ದಾರೆ.
- **ಗಿರೀಶ್ ಲಿಂಗಣ್ಣ (2019) :** ಬೆಂಗಳೂರಿನ ಗಿರೀಶ್ ಲಿಂಗಣ್ಣ ಅವರು ಮೆಕ್ಯಾನಿಕಲ್ ಇಂಜಿನಿಯರಿಂಗ್ ಸ್ನಾತಕೋತ್ತರ ಪದವೀಧರರಾಗಿದ್ದಾರೆ. ಬಾಹ್ಯಾಕಾಶ, ರಕ್ಷಣೆ, ಅಂತಾರಾಷ್ಟ್ರೀಯ ವ್ಯವಹಾರಗಳ ವಿಶ್ಲೇಷಕ. ಸಂಯುಕ್ತ ಕರ್ನಾಟಕ ,ಕನ್ನಡ ಪ್ರಭ, ಇಂಡಿಯನ್ ಎಕ್ಸ್‌ಪ್ರೆಸ್ ದಿನಪತ್ರಿಕೆಗಳ ಜಾಲತಾಣಗಳ ಅಂಕಣಕಾರರಾಗಿದ್ದಾರೆ. ವಿಜಯ ಕರ್ನಾಟಕ, ಉದಯವಾಣಿ, ವಿಶ್ವವಾಣಿ, ಪತ್ರಿಕೆಗಳಲ್ಲಿ ಒನ್ ಇಂಡಿಯ ಜಾಲತಾಣದಲ್ಲಿ ನಿರಂತರ ಲೇಖನಗಳನ್ನು ಬರೆಯುತ್ತಿದ್ದಾರೆ. ವಿವಿಧ ರಾಷ್ಟ್ರೀಯ, ಅಂತಾರಾಷ್ಟ್ರೀಯ ಇಂಗ್ಲಿಷ್ ಪತ್ರಿಕೆಗಳು, ನಿಯತಕಾಲಿಕೆಗಳಲ್ಲಿ ಲೇಖನಗಳು ಪ್ರಕಟವಾಗುತ್ತಿವೆ. ಪ್ರಚಲಿತ ವಿಚಾರಗಳ ಕುರಿತು ಸುವರ್ಣ ನ್ಯೂಸ್, ದೂರದರ್ಶನ, ಆಕಾಶವಾಣಿ, ಚಂದನ ವಾಹಿನಿಗಳಲ್ಲಿ ಪ್ಯಾನೆಲಿಸ್ಟ್ ಆಗಿ ಭಾಗಿ. ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದ ಸುದ್ದಿ ವಾಹಿನಿಗಳಲ್ಲಿ ಸಂವಾದ, ಚರ್ಚೆಗಳಲ್ಲಿ ಪ್ಯಾನೆಲಿಸ್ಟ್ ಆಗಿದ್ದಾರೆ.
- **ನೌಶಾದ್ ಬಿಜಾಪುರ (2021) :** ಮೂಲತ: ಧಾರವಾಡದವರು. ಪ್ರಸ್ತುತ ಬೆಳಗಾವಿಯಲ್ಲಿ ನೆಲೆಸಿದ್ದು, ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ದಿನಪತ್ರಿಕೆಯ ಹಿರಿಯ ಸಹಾಯಕ ಸಂಪಾದಕರಾಗಿದ್ದಾರೆ. ಕಳೆದ 25 ವರ್ಷಕ್ಕೂ ಹೆಚ್ಚು ಕಾಲದಿಂದ ಡೆಕ್ಕನ್ ಕ್ರೋನಿಕಲ್, ಡೆಕ್ಕನ್ ಹೆರಾಲ್ಡ್, ಇಂಡಿಯನ್ ಎಕ್ಸ್‌ಪ್ರೆಸ್ ಪತ್ರಿಕೆಗಳಲ್ಲಿ ಸೇವೆ ಸಲ್ಲಿಸಿ ಈಗ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ದಿನಪತ್ರಿಕೆಯಲ್ಲಿ ಹಲವಾರು ಅಭಿವೃದ್ಧಿ ಮತ್ತು ಸಾಮಾಜಿಕ ಚಿಂತನೆಗಳಿಂದ ಕೂಡಿದ ಲೇಖನ ಹಾಗೂ ವರದಿಗಳನ್ನು ಪ್ರಕಟಿಸಿದ್ದಾರೆ.
- **ಎಸ್.ಗಿರೀಶ್ ಬಾಬು (2023):** ಬೆಂಗಳೂರಿನವರಾದ ಎಸ್.ಗಿರೀಶ್ ಬಾಬು ಅವರು ಉದಯಟಿವಿ, ವಿಜಯಕರ್ನಾಟಕ , ಉದಯವಾಣಿ, ಮತ್ತಿತರ ಮಾಧ್ಯಮಗಳಲ್ಲಿ 27 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಪ್ರಸ್ತುತ ಕನ್ನಡಪ್ರಭ ದಿನಪತ್ರಿಕೆಯ ಕಾರ್ಯನಿರ್ವಾಹಕ ಸಂಪಾದಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಬೆಳಗಾವಿಯಲ್ಲಿ ವರದಿಗಾರರಾಗಿ ಕಾರ್ಯ ನಿರ್ವಹಿಸುವ ಅವಧಿಯಲ್ಲಿ ಕೊಕಟನೂರು ಜಾತ್ರೆಯಲ್ಲಿ ಮುತ್ತುಕಟ್ಟುವ (ದೇವದಾಸಿ) ಪದ್ಧತಿ ಬಗ್ಗೆ ಬರೆದ ವರದಿಯು ಈ ಸಾಮಾಜಿಕ ಅನಿಷ್ಠದ ನಿರ್ಮೂಲನೆಗೆ ನೆರವಾಯಿತು. ಶಿಕ್ಷಣ, ಆರೋಗ್ಯ, ಪರಿಸರ , ರಕ್ಷಣೆ, ವಿಜ್ಞಾನ, ತಂತ್ರಜ್ಞಾನ ಬೀಟ್ಗಳಲ್ಲಿ ನೂರಾರು ವರದಿಗಳನ್ನು ಪ್ರಕಟಿಸಿದ್ದಾರೆ. ಭಾರತೀಯ ರಕ್ಷಣಾ ಇಲಾಖೆಯು ಪತ್ರಕರ್ತರಿಗಾಗಿ ನಡೆಸುವ ಡಿಫೆನ್ಸ್ ಕರೆಸ್ಪಾಂಡೆನ್ಸ್ ಕೋರ್ಸ್ನಲ್ಲಿ ಭಾಗವಹಿಸಿ ಕಾರ್ಗಿಲ್, ಲೇಹ್ ಸೇರಿದಂತೆ ಮತ್ತಿತರ ಪ್ರದೇಶಗಳಿಗೆ ಭೇಟಿ ನೀಡಿ ವರದಿ ಮಾಡಿರುತ್ತಾರೆ. ಶೀಘ್ರದಲ್ಲಿಯೇ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗುವುದು ಎಂದು ತಿಳಿಸಿದೆ.

### ಸತೀಶ್ ಜಿ.ಟಿ (2022)



ಮೂಲತ: ಚಿತ್ರದುರ್ಗದವರು. ಮೈಸೂರು ವಿಶ್ವವಿದ್ಯಾನಿಲಯದಿಂದ ಇಂಗ್ಲೀಷ್ ಸಾಹಿತ್ಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. 2004ರಿಂದ 2011ರವರೆಗೆ ವಿಜಯ ಟೈಮ್ಸ್, ಡೆಕ್ಕನ್ ಹೆರಾಲ್ಡ್ ಪತ್ರಿಕೆಗಳಲ್ಲಿ ಹಿರಿಯ ವರದಿಗಾರರಾಗಿ ಸೇವೆ ಸಲ್ಲಿಸಿದ್ದಾರೆ. 2011 ರಿಂದ ಈವರೆಗೆ ದಿ ಹಿಂದೂ ದಿನಪತ್ರಿಕೆಯ ಹಾಸನ ವಿಭಾಗದ ವಿಶೇಷ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಭಿವೃದ್ಧಿಯ ವಿವಿಧ ಆಯಾಮಗಳ ಮೇಲೆ ಬೆಳಕು ಚೆಲ್ಲುವ ಅನೇಕ ವರದಿಗಳನ್ನು ಪ್ರಕಟಿಸಿದ್ದಾರೆ. ವಿನೋದ್ ಮೆಹ್ತಾ ಅವರ ಆತ್ಮಕಥೆ 'ಲಖನೌ ಹುಡುಗ' , ವಿನೋದ್ ಕಾಪ್ರಿ ಅವರ 'ಮನೆ ಸೇರಲು 1232 ಕಿ.ಮೀ ಸಾಗಿದ ದೂರ' , ನ್ಯಾಯಮೂರ್ತಿ ಕೆ.ಚಂದ್ರು ಅವರ 'ನನ್ನ ದೂರು ಕೇಳಿ ಮಹಿಳೆಯರು ನ್ಯಾಯಾಲಯದ ಕದ ತಟ್ಟಿದಾಗ' ಅಜಿತ್ ಪಿಳ್ಳೆ ಅವರ 'ಇದು ಯಾವ ಸೀಮೆ ಚರಿತ್ರೆ' ಮೊದಲಾದ ಕೃತಿಗಳನ್ನು ಕನ್ನಡಕ್ಕೆ ಅನುವಾದಿಸಿದ್ದಾರೆ.

### ಯೋಗೇಶ್ ಎಂ.ಎನ್. (2020)



ಮಂಡ್ಯ ಜಿಲ್ಲೆ ಕೆ.ಆರ್.ಪೇಟೆ ತಾಲ್ಲೂಕು ಮಾರೇನಹಳ್ಳಿ ಗ್ರಾಮದವರು. ಕಳೆದ ಸುಮಾರು 20 ವರ್ಷಗಳಿಂದ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಪ್ರಸ್ತುತ ಪ್ರಜಾವಾಣಿ ದಿನಪತ್ರಿಕೆಯ ಚಿತ್ರದುರ್ಗ ಜಿಲ್ಲಾ ವರದಿಗಾರರಾಗಿದ್ದಾರೆ. ಭ್ರೂಣಹತ್ಯೆ ತಡೆ, ಉನ್ನತ ಶಿಕ್ಷಣ ಸೇರಿದಂತೆ ಅಭಿವೃದ್ಧಿ ವಿಷಯಗಳ ಕುರಿತು ಪರಿಣಾಮಕಾರಿ ವರದಿಗಳನ್ನು ಪ್ರಕಟ ಮಾಡಿದ್ದಾರೆ. 'ಜೀವಸೆಲೆ ಕಾಮೇಗೌಡ' ಕೃತಿಯು ಮಂಡ್ಯ ವಿಶ್ವವಿದ್ಯಾಲಯಕ್ಕೆ ಪಠ್ಯವಾಗಿದೆ. ಸಕ್ಕರೆಯ ಅಕ್ಕರೆ, ವರ್ಣ ಕೃತಿಗಳು ಪ್ರಕಟವಾಗಿವೆ. ಭಾರತೀಯ ರಂಗ ಶಿಕ್ಷಣ ಕೇಂದ್ರದಲ್ಲಿ ತರಬೇತಿ ಪಡೆದಿದ್ದಾರೆ. ವಿವಿಧ ಹವ್ಯಾಸಿ ನಾಟಕಗಳಲ್ಲಿ ಅಭಿನಯಿಸಿದ್ದಾರೆ.

ಪ್ರಮುಖ ಸುದ್ದಿ

### ಕೋರೆಗಾಂವ್ ವಿಜಯೋತ್ಸವ

# ಡಾ.ಬಿ.ಆರ್.ಅಂಬೇಡ್ಕರ್‌ರವರ ದಕ್ಷತೆ, ಪ್ರಾಮಾಣಿಕತೆಗೆ ದೊರೆತ ಫಲ: ಎಂ.ಶಿವಮೂರ್ತಿ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಸಮಾಜದಲ್ಲಿದ್ದ ಜಾತಿಪದ್ಧತಿಯ ವಿರುದ್ಧ ಜಾಗೃತಿ ಹೋರಾಟ ನಡೆಸಿದ ಅನೇಕ ಮಹಾನೀಯರು ತಮ್ಮದೇಯಾದ ಕೊಡುಗೆಯನ್ನುನೀಡುವ ಮೂಲಕ ಸಮಾಜವನ್ನು ಉತ್ತಮ ಸ್ಥಿತಿಗೆ ತರುವಲ್ಲಿ ಯಶಸ್ವಿಯಾದರು. ದಲಿತ ಸಮುದಾಯದ ಅಭ್ಯುದಯಕ್ಕಾಗಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಪೇಶ್ವೆಗಳ ವಿರುದ್ಧ ಹೋರಾಡಿ ಜಯತಂದುಕೊಟ್ಟಿದ್ದು ಇದನ್ನು ಭೀಮಾ ಕೋರೆಗಾಂವ್ ವಿಜಯೋತ್ಸವವಾಗಿ ಆಚರಿಸಲಾಗುತ್ತಿದೆ ಎಂದು ಜಿಲ್ಲಾ ಮಾದಿಗ ಮಹಾಸಭಾದ ಜಿಲ್ಲಾಧ್ಯಕ್ಷ, ಮಾಜಿ ಪುರಸಭಾ ಸದಸ್ಯ ಎಂ.ಶಿವಮೂರ್ತಿ ತಿಳಿಸಿದರು.

ಅವರು, ಬುಧವಾರ ಅಂಬೇಡ್ಕರ್ ವೃತ್ತದಲ್ಲಿ ಸಾಮಾಜಿಕ ಸಂಘರ್ಷ ಸಮಿತಿ ಹಾಗೂ ವಿವಿಧ ದಲಿತ ಸಂಘಟನೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಭೀಮಾ ಕೋರೆಗಾಂವ್ ವಿಜಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಇಂತಹ ಕಾರ್ಯಕ್ರಮಗಳನ್ನು ದಲಿತ ಸಮುದಾಯ ತನ್ನ ಸಂಘಟನೆಯನ್ನು ಬಲಪಡಿಸಿಕೊಳ್ಳಲು ಸದ್ವಿನಿಯೋಗ ಪಡಿಸಿಕೊಳ್ಳಬೇಕು ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ಬುದ್ಧವೇದಿಕೆ ಅಧ್ಯಕ್ಷ ಮೈತ್ರಿದ್ಯಾಮಣ್ಣ, ಕೋರೆಗಾಂವ್ ಚಳುವಳಿ ವಿಜಯೋತ್ಸವದಿಂದ ಡಾ.ಬಿ.ಆರ್. ಅಂಬೇಡ್ಕರ್ ಈ ದೇಶದ ಸಮರ್ಥನಾಯಕ ಎಂಬುವುದನ್ನು ನಿರೂಪಿಸಿದಂತಾಯಿತು. ಇಂದಿಗೂ ದಲಿತ ಸಮುದಾಯ ಸಮಾಜದಲ್ಲಿ ನೆಲೆಕಂಡಿದೆ ಎಂದರೆ ಅದಕ್ಕೆ ಅಂಬೇಡ್ಕರ್ ಕಾರಣ ಎಂದರು.

ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಸಾಮಾಜಿಕ ಸಂಘರ್ಷ ಸಮಿತಿ ತಾಲ್ಲೂಕು ಅಧ್ಯಕ್ಷ ಉಮೇಶ್‌ಚಂದ್ರಬ್ಯಾನರ್ಜಿ ತಮ್ಮ ಅಧ್ಯಕ್ಷ ಭಾಷಣದಲ್ಲಿ ಕೋರೆಗಾಂವ್ ವಿಜಯೋತ್ಸವ ಈ ಸಮಾಜಕ್ಕೆ ದಿಕ್ಸೂಚಿಯಾಗಿದೆ. ಎಂತಹ ಸಂದರ್ಭದಲ್ಲಿ ದಲಿತರು ದೃತಿಗೆಡದೆ ತಮ್ಮ ನ್ಯಾಯುತ ಹೋರಾಟಕ್ಕಾಗಿ ಹೋರಾಟ ನಡೆಸಬೇಕೆಂಬುವುದನ್ನು ಕೋರೆಗಾಂವ್ ವಿಜಯೋತ್ಸವ ಒತ್ತಿಹೇಳಿದೆ. ಸಮಾಜದಲ್ಲಿ ಆಳಾವಾಗಿ ಬೇರೂರಿರುವ ಜಾತಿಪದ್ದತಿ, ಅಸ್ಪ್ರಶ್ಯತೆ, ಅಸಮತೋಲನ, ಜಾತಿತಾರತಮ್ಯ, ಸಾಮಾಜಿಕ ಜಾಗೃತಿಯಿಂದ ಮಾತ್ರ ನಾವೆಲ್ಲರೂ ಜಾಗೃತರಾಗಿ ಅಂಬೇಡ್ಕರ್ ತತ್ವ, ಸಿದ್ಧಾಂತ, ಮೌಲ್ಯಗಳನ್ನು ಅಳವಡಿಸಿಕೊಂಡು ಅಭಿವೃದ್ಧಿ ಪಥದತ್ತ ಹೆಜ್ಜೆಇಡಬೇಕೆಂದರು. ಕಾರ್ಯಕ್ರಮದಲ್ಲಿ ಆಮ್‌ಆದ್ಮಿಪಕ್ಷದ ತಾಲ್ಲೂಕು ಅಧ್ಯಕ್ಷ ಪಾಪಣ್ಣ, ರವಿಕುಮಾರ್, ಮಂಜುನಾಥ, ಜಗದೀಶ್, ಪೆನ್ನೇಶ್, ರೇವಣಸಿದ್ದಪ್ಪ, ಆರ್.ವೀಭದ್ರಪ್ಪ, ಮೃತ್ಯುಂಜಯ, ವೀರೇಶ್ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಕನ್ನಡ ಪುಸ್ತಕ ಪ್ರಾಧಿಕಾರದಿಂದ ಶೇ.50 ರಷ್ಟು ರಿಯಾಯಿತಿ

» **ದಾವಣಗೆರೆ**

ಗಣರಾಜ್ಯೋತ್ಸವದ ದಿನಾಚರಣೆಯ ಅಂಗವಾಗಿ 2025ರ ಜನವರಿ ತಿಂಗಳು ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಕನ್ನಡ ಪುಸ್ತಕ ಪ್ರಾಧಿಕಾರದ ಆನ್ ಲೈನ್ https://kpp.karnataka.gov.in ನಲ್ಲಿ ಕೂಡ ಈ ಶೇ.50 ರಿಯಾಯಿತಿ ಲಭ್ಯವಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 080–22107705 ಸಂಪರ್ಕಿಸಿ.

### ರಿಯಾಯಿತಿ ದರದ ಬಸ್ ಪಾಸ್

» **ದಾವಣಗೆರೆ**

ಪ್ರಸಕ್ತ ಸಾಲಿನ ವಿಕಲಚೇತನ ಫಲಾನುಭವಿಗಳು ರಿಯಾಯಿತಿ ದರದ ಬಸ್‌ಪಾಸ್ (ಹೊಸ, ನವೀಕರಣ) ಗಳನ್ನು ಪಡೆಯಲು ಸೇವಾ ಸಿಂಧು ಫೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೇವಾ ಸಿಂಧು ಪೋರ್ಟಲ್ ನಲ್ಲಿ http://serviceonline.gov.in/karnatka/ ನಲ್ಲಿ ಘಟಕ ವ್ಯವಸ್ಥಾಪಕರ ಕೌಂಟರ್ (ಐಡಿ) ಗೆ ಅರ್ಜಿ ಸಲ್ಲಿಸಬಹುದು. ಮತ್ತು ಹೊಸ ಪಾಸ್ ಗಳನ್ನು ಪಡೆಯಲು ವಿಭಾಗೀಯ ನಿಯಂತ್ರಣಾಧಿಕಾರಿಗಳು ದಾವಣಗೆರೆ ವಿಭಾಗ ರವರ ಕೌಂಟರ್ (ಐಡಿ) ಗೆ ಅರ್ಜಿ ಸಲ್ಲಿಸಬೇಕು.

ಪಾಸ್ ನವೀಕರಣ ಮಾಡಿಸಿಕೊಳ್ಳುವ ವಿತರಣಾ ಕೇಂದ್ರ: ಜನವರಿ 1 ರಿಂದ ಫೆಬ್ರವರಿ 28 ರವರೆಗೆ ದಾವಣಗೆರೆ ಬಸ್ ನಿಲ್ದಾಣದಲ್ಲಿ ದಾವಣಗೆರೆ, ಜಗಳೂರು, ಚನ್ನಗಿರಿ ಫಲಾನುಭವಿಗಳು ನವೀಕರಣ ಮಾಡಿಸಿಕೊಳ್ಳಬಹುದು. ಜನವರಿ 1 ರಿಂದ ಫೆಬ್ರವರಿ 28 ರವರೆಗೆ ಹರಿಹರ ಬಸ್ ನಿಲ್ದಾಣದಲ್ಲಿ ಹರಿಹರ ಫಲಾನುಭವಿಗಳು ಪಾಸ್ ನವೀಕರಣ ಮಾಡಿಸಿಕೊಳ್ಳಬಹುದು. ವಿಕಲಚೇತನ ಫಲಾನುಭವಿಗಳು ಆನ್ ಲೈನ್ ನಲ್ಲಿ ಸಂಬಂಧಪಟ್ಟ ದಾಖಲೆಗಳನ್ನು (ಯುಡಿಐಡಿ ಕಾರ್ಡ್, ಆಧಾರ್ ಕಾರ್ಡ್, ಅಂಗವಿಕಲರ ಗುರುತಿನ ಚೀಟಿ, ಪೋಟೋ) ಆಫ್ ಲೋಡ್ ಮಾಡುವುದು ಕಡ್ಡಾಯ. ಹಾಗೂ ಭೌತಿಕವಾಗಿ ಪಾಸ್ ಪಡೆಯಲು ಬಂದಾಗ ಮೂಲ ದಾಖಲೆಗಳು ಹಾಗೂ ಜೆರಾಕ್ಸ್ ಪ್ರತಿಯನ್ನು ಹಾಜರುಪಡಿಸಿ ವಿಕಲಚೇತನರ ಹೊಸ, ನವೀಕರಣ ಪಾಸ್ ಗಳನ್ನು ಪಡೆದುಕೊಳ್ಳಬೇಕೆಂದು ಕ.ರಾ.ರ.ಸಾ.ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

### ಕಾನೂನು ಪದವೀಧರರಿಗೆ ತರಬೇತಿ ಭತ್ಯೆ

» **ದಾವಣಗೆರೆ**

2024–25ನೇ ಸಾಲಿನ ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ಭತ್ಯೆ ನೀಡಲು ಅರ್ಹ ಕಾನೂನು ಪದವೀಧರರಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೊಠಡಿ 46, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಕರೂರು ರಸ್ತೆ, ದಾವಣಗೆರೆ –577006 ಅರ್ಜಿಗಳನ್ನು ಕಚೇರಿಯಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಜನವರಿ 18 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಯರಗುಂಟೆ ವಿತರಣಾ ಕೇಂದ್ರದಿಂದ ಹೊರುಡುವ ಎಸ್‌ಜೆಎಂ ಮಾರ್ಗದ ವ್ಯಾಪ್ತಿಯಲ್ಲಿ ಜಲಸಿರಿ ಕಾಮಗಾರಿಯನ್ನುನಿರ್ವಹಿಸಬೇಕಾಗಿರುವುದರಿಂದ ಜ.2 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಸ್‌ಪಿಎಸ್ ನಗರ , ಬಿಎನ್ –1 ಲೇಔಟ್ , ಭಾಷಾ ನಗರ , ಚೌಡೇಶ್ವರಿ ನಗರ , ಗಾಂಧಿನಗರ , ಶಿವನಗರ ,ಎಸ್‌ಎಸ್‌ಎಂ ನಗರ , ಬಿ.ಡಿ ಲೇಔಟ್ , ಬಿಸ್ಮಿಲ್ಲಾ ಲೇಔಟ್ , ಹೆಗ್ಡೆ ನಗರ, ಮುಸ್ತಫಾ ನಗರ , ಅಜಾದ್ ನಗರ ,ಭಾಷಾ ನಗರ ಮೇನ್ ರೋಡ್ ಎಸ್‌ಜೆಎಂ ನಗರ 1 ನೇ ಕ್ರಾಸ್ ನಿಂದ 16 ನೇ ಕ್ರಾಸ್ ವರೆಗೆ , ಸೇವಾದಳ ಕಾಲೋನಿ , ಹೊಸ ಕ್ಯಾಂಪ್ , ಬಿ ಎನ್ ಲೇಔಟ್,ಮಾಗನಹಳ್ಳಿ ಲೇಔಟ್ ಸುತ್ತ ಮುತ್ತ, ಕೊಂಡಜ್ಜಿ ರೋಡ್, ವಿಜಯನಗರ ಬಡಾವಣೆ , ಎಸ್‌ಎಂಕೆ ನಗರ 2 ನೇ ಹಂತ ಸುತ್ತ ಮುತ್ತಲ್ಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

### ಪಿಹೆಚ್‌ಡಿ ವ್ಯಾಸಂಗ ವೇತನಕ್ಕಾಗಿ ಅರ್ಜಿ

» **ದಾವಣಗೆರೆ**

2024–25ನೇ ಸಾಲಿನ ಪ್ರಥಮ ವರ್ಷದಲ್ಲಿ ಪೂರ್ಣಾವಧಿ ಪಿಹೆಚ್‌ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ,3.ಬಿ ಗೆ ಸೇರಿದ ಹೊಸ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ, ಫೆಲೋಶಿಪ್ ನೀಡಲು ಅರ್ಹ ವಿದ್ಯಾರ್ಥಿಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜ.20 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್ http://www.bcwd.karnataka.gov.in

# ಸಹಕಾರ ಕ್ಷೇತ್ರದ ಬೆಳವಣಿಗೆಗೆ ವಿಶ್ವಾಸಾರ್ಹತೆ ಮುಖ್ಯ

» **ಹೊಸದುರ್ಗ**



ಸಹಕಾರ ಕ್ಷೇತ್ರದ ಬೆಳವಣಿಗೆಗೆ ಬಹು ಮುಖ್ಯವಾಗಿ ವಿಶ್ವಾಸಾರ್ಹತೆ ಅಗತ್ಯ,ಸಾಲ ಪಡೆದವರು ಸಕಾಲದಲ್ಲಿ ಮರು ಪಾವತಿ ಮಾಡುವುದರಿಂದ ಸಹಕಾರ ಸಂಘಗಳು ಉಳಿದು ಬೆಳೆಯಲು ಅವಕಾಶವಾಗುತ್ತದೆ ಎಂದು ಹೊಸದುರ್ಗ ಸೌಹಾರ್ಥ ಸಹಕಾರಿ ನಿಯಮಿತ ಸಂಘದ ಅಧ್ಯಕ್ಷ ಅಗ್ರೋ.ಹೆಚ್.ಶಿವಣ್ಣ ಅಭಿಪ್ರಾಯಿಸಿದರು.

ಪಟ್ಟಣದ ಸೌಹಾರ್ಥ ಸಹಕಾರಿ ಬ್ಯಾಂಕ್ ಆವರಣದಲ್ಲಿ ಸೌಹಾರ್ದ ಸಹಕಾರಿ ಚಳುವಳಿಯ ರಜತ ಮಹೋತ್ಸವ ವರ್ಷದ ಅಂಗವಾಗಿ ಬುಧವಾರ ಆಯೋಜಿಸಲಾಗಿದ್ದ ಸೌಹಾರ್ದ ಸಹಕಾರಿ ದಿನಾಚರಣೆ ಹಾಗೂ ಹೊಸ ವರ್ಷಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಗರ ದೇವತೆಯಾದ ಶ್ರೀ ದುರ್ಗಾದೇವಿಯವರ ಆಶೀರ್ವಾದದ ಚೈತನ್ಯದಿಂದ ಸಂಘ ಉದಯವಾಗಿ ಇಲ್ಲಿಗೆ ಆರು ವರ್ಷಗಳು ಕಳೆದಿವೆ,ವ್ಯವಹಾರದಲ್ಲಿ ಗ್ರಾಹಕರುಉತ್ತಮವಾಗಿಸಹಕರಿಸುತ್ತಿದ್ದಾರೆ, ಅಂದು ಸಹಕಾರಿ ಪಿತಮಹ ಸಿದ್ದನಗೌಡ ಪಟೇಲ್ ಅವರು ಹಾಕಿ ಕೊಟ್ಟ ಸಹಕಾರಿ ಮಾರ್ಗದಿಂದ ಇಂದು ಸಾಕಷ್ಟು ಸಹಕಾರಿ ಸಂಘಗಳು ಬೆಳೆದು ತಲೆ ಎತ್ತಿ ನಿಂತು ನೂರಾರು ಕೋಟಿ ವ್ಯಾವಹಾರ ಮಾಡುವುದರ ಮೂಲಕ ಲಕ್ಷಾಂತರ ಬಡವರ ಬದುಕಿಗೆ ದಾರಿ ದೀಪವಾಗಿವೆ ಎಂದರು. ಉಪಾಧ್ಯಕ್ಷ ಡಿ.ಆರ್.ನಾಗೇಶಪ್ಪ ಮಾತನಾಡಿ ಒಳ್ಳೆಅಭಿಪ್ರಾಯ ಹೊಂದಿರುವ ಸದುದ್ದೇಶದ ಗ್ರಾಹಕರು ಬಹಳ ಮುಖ್ಯ ,ಸಹಕಾರಿ ಸಂಘಗಳು ಗ್ರಾಹಕರಿಗೆ ಸೇರಿದ ಸಂಸ್ಥೆ ಎಂಬುದೇ ಸಹಕಾರಿ ಕ್ಷೇತ್ರದ ಸಂದೇಶವಾಗಿದೆ,ಸಹಕಾರಿ ಕ್ಷೇತ್ರದಲ್ಲಿ ಆತ್ಮೀಯತೆ ಇದೆ ಎಂದರು. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ವ್ಯವಹರಿಸುವುದು ಬಹಳ ಕಷ್ಟಕರ ಸಂಗತಿಯಾಗಿದೆ ಎಂಬ ವಿಷಾದ ವ್ಯಕ್ತಪಡಿಸಿದರು.

ನಿವೃತ್ತ ಡಿಡಿಪಿಐ ರಾಮಪ್ಪ ಮಾತನಾಡಿ ಸಹಕಾರ ಕ್ಷೇತ್ರದಲ್ಲಿ ಜಾತಿ,ಮತ,ಧರ್ಮಗಳ ಸೋಂಕು ಇರುವುದಿಲ್ಲ ಎಂದು ಅಭಿಪ್ರಾಯಿಸಿದರು.

ಈಸಂಧರ್ಬದಲ್ಲಿ ನಿರ್ಧೆಶಕರುಗಳಾದ ಹೊಸಹಳ್ಳಿಕೃಷ್ಣಪ್ಪ, ಬ್ರಹ್ಮಪಾಲ್, ಆಶ್ರಫ್‌ವುಲ್ಲಾ ಗೋಪಾಲ್, ಪುರಸಭಾ ಸದಸ್ಯ ಶಂಕರಪ್ಪ, ಶ್ರೀಮತಿ ದೀಪಿಕಾಸತೀಶ್, ಶ್ರೀಮತಿ ವೀಣಾನಟರಾಜ್, ವಿನಯ್, ರಮೇಶ್ ಮತ್ತಿತರರು ಉಪಸ್ಥಿತರಿದ್ದರು.

# ಹೊಸದುರ್ಗ ಪುರಸಭೆಗೆ ಅಮೃತನಗರೋತ್ತಾನ ಯೋಜನೆ ಅಡಿಯಲ್ಲಿ 10 ಕೋಟಿ ರೂ ಅನುದಾನ

## ಪೌರಕಾರ್ಮಿಕರೋಡಗೂಡಿ ಹೊಸವರ್ಷ ಆಚರಣೆ ಮಾಡಿದ ಪುರಸಭಾ ಅಧಿಕಾರಿಗಳು

» **ಹೊಸದುರ್ಗ**



ಹೊಸದುರ್ಗ ಪಟ್ಟಣಕ್ಕೆ ಅಮೃತನಗರೋತ್ತಾನ ಯೋಜನೆ ಅಡಿಯಲ್ಲಿ ಇಲ್ಲಿನ ಪುರಸಭೆಗೆ ಶಾಸಕ ಬಿ.ಜಿ.ಗೋವಿಂದಪ್ಪನವರು 10 ಕೋಟಿ ಅನುದಾನ ಬಿಡುಗಡೆ ಮಾಡಿಸಿದ್ದರೆ, ಈ ಅನುದಾನದಲ್ಲಿ ಮುಂದೆ ಆಹಬಹುದಾದ ವಿವಿಧ ಕಾಮಗಾರಿಗಳ ಬಗ್ಗೆ ಹೊಸದುರ್ಗ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ತಿಳಿಸಿದರು

ಪಟ್ಟಣದ ಪುರಸಭಾ ಆವರಣದಲ್ಲಿ ಬುಧವಾರ ಮುಂಜಾನೆ ಪೌರಕಾರ್ಮಿಕರೋಡಗೂಡಿ ಹೊಸವರ್ಷದ ಅಂಗವಾಗಿ ತುರ್ತು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕೇಕ್ ಕಟ್ ಮಾಡಿ ನಂತರ ಮಾತನಾಡಿದರು.

ಈ ಒಂದು ಯೋಜನೆಯಿಂದ ಪಟ್ಟಣದ ಸರ್ವತೋಮುಖ ಅಭಿವೃದ್ಧಿ ಮತ್ತು ದೊಡ್ಡ ದೊಡ್ಡ ಕಾಮಗಾರಿಗಳನ್ನ ಕೈಗೊಳ್ಳುವ ಮೂಲಕ ಸಿಸಿ ರಸ್ತೆ, ದೊಡ್ಡಚರಂಡಿ, ಮಳೆ ನೀರು ಚರಂಡಿ ಮತ್ತು ರಾಜ ಕಾಲುವೆಗಳನ್ನು ಅಭಿವೃದ್ಧಿ ಪಡಿಸುವ ಮೂಲಕ ಪಟ್ಟಣದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಎಲ್ಲಾ ಕಾಮಗಾರಿಗಳನ್ನ ನಿರ್ವಹಿಸಲಾಗುವುದು .

ವಾರ್ಡುಗಳಲ್ಲಿ ಪ್ರಮುಖ ರಸ್ತೆ,ಸಿಸಿ ಚರಂಡಿ,ಸಿಸಿ ರಸ್ತೆ ಮಾಡುವ ಮೂಲಕ ಯಾವುದೇ ರೀತಿಯಲ್ಲಿ ಮಳೆಯ ಮತ್ತು ಕೊಳಚೆ ನೀರು ಸಂಗ್ರಹವಾಗದೆ ನೀರು ಸರಾಗವಾಗಿ ಹರಿಯುವಂತೆ ಅನುಕೂಲವಾಗುವ ನಿಟ್ಟಿನಲ್ಲಿ ಕಾಮಗಾರಿಗಳನ್ನು ನಿರ್ಮಾಣ ಮಾಡಲಾಗವುದು ಎಂದರು.

ಈ ಸಂಧರ್ಬದಲ್ಲಿ ಆರೋಗ್ಯ ಶಾಖೆಯ ಬಸವರಾಜ್,ಕಲ್ಪನ, ಪುರಸಭಾ ಸದ್ಯ ಶಂಕರಪ್ಪ ಸೇರಿದಂತೆ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

## ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನ ಆಚರಣೆ



» **ದಾವಣಗೆರೆ**

ಜಿಲ್ಲಾಡಳಿತ ಮತ್ತು ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪುಷ್ಪ ಅರ್ಪಿಸುವ ಮೂಲಕ ಆಚರಿಸಲಾಯಿತು. ಈ ವೇಳೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಪಾಲಿಕೆ ಉಪಮಹಾಪೌರರಾದ ಸೋಗಿ ಶಾಂತಕುಮಾರ್, ಪಾಲಿಕೆ ಸದಸ್ಯರು, ಪಾಲಿಕೆ ಆಯುಕ್ತರಾದ ರೇಣುಕಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ, ವಿಶ್ವಕರ್ಮ ಸಮಾಜದ ಮುಖಂಡರು ಇತರರು ಇದ್ದರು.

## ಪಿ.ಎಲ್.ಡಿ.ಬ್ಯಾಂಕ್ ನಿರ್ದೇಶಕರುಗಳ ಆಯ್ಕೆಗೆ ನಡೆಯುವ ಚುನಾವಣೆಗೆ ನಂದಿ ನಾಗರಾಜ್ ನಾಮಪತ್ರ



» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ಗೆ ಜ.12 ರಂದು ನಿರ್ದೇಶಕರುಗಳ ಆಯ್ಕೆಗೆ ನಡೆಯುವ ಚುನಾವಣೆಗೆ ಸಾಲಗಾರರಲ್ಲದ ಕ್ಷೇತ್ರದಿಂದ ಮಾರಘಟ್ಟದ ನಂದಿ ನಾಗರಾಜ್ ಜ.1 ರಂದು ಪಿ.ಎಲ್.ಡಿ. ಬ್ಯಾಂಕ್‌ನಲ್ಲಿ ಚುನಾವಣಾಧಿಕಾರಿಗೆ ನಾಮಪತ್ರ ಸಲ್ಲಿಸಿದರು. ನಾಮಪತ್ರ ಸಲ್ಲಿಕೆಗೆ ಜ.4 ಕಡೆ ದಿನವಾಗಿದ್ದು, 5 ರಂದು ಪರಿಶೀಲನೆ, ನಾಮಪತ್ರ ಹಿಂದಕ್ಕೆ ಪಡೆಯಲು 6 ಕಡೆಯ ದಿನವಾಗಿರುತ್ತದೆ.

# ಕಟ್ಟಡ ಕಾರ್ಮಿಕರ ಕಚೇರಿಯಲ್ಲಿ ಹೊಸ ವರ್ಷ ಆಚರಣೆ

» **ಚಿತ್ರದುರ್ಗ**



ಚಿತ್ರದುರ್ಗ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಕಚೇರಿಯಲ್ಲಿ ಬುಧವಾರ ಕೇಕ್ ಕತ್ತರಿಸುವ ಮೂಲಕ ಹೊಸ ವರ್ಷ ಆಚರಿಸಲಾಯಿತು.

ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಕೇಕ್ ಕತ್ತರಿಸಿ ಮಾತನಾಡುತ್ತ ಕಾರ್ಮಿಕರಿಗೆ ನಾನಾ ರೀತಿಯ ಸಮಸ್ಯೆಗಳಿವೆ. ಸರ್ಕಾರ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಿದರೆ ಕಟ್ಟಡ ಕಾರ್ಮಿಕರು ನೆಮ್ಮದಿಯ ಬದುಕು ಕಟ್ಟಿಕೊಳ್ಳಬಹುದೆಂದು ಸಮಸ್ತ ಕಟ್ಟಡ ಕಾರ್ಮಿಕರಿಗೆ ಹೊಸ ವರ್ಷದ ಶುಭಾಷಯಗಳನ್ನು ಕೋರಿದರು.ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಪ್ರಧಾನ ಕಾರ್ಯದರ್ಶಿ ಎ.ನಾಗರಾಜು, ಉಪಾಧ್ಯಕ್ಷ ಮಲ್ಲಿಕಾರ್ಜುನ್, ಮಹಿಳಾ ಪ್ರಧಾನ ಕಾರ್ಯದರ್ಶಿ ಲಕ್ಷ್ಮಿದೇವಿ, ಗ್ರಾಮಾಂತರ ಕಾರ್ಯದರ್ಶಿಗಳಾದ ಜಗದೀಶ್ ಕ್ಯಾದಿಗೆರೆ, ಹನುಮಂತಪ್ಪ ಮೆದೇಹಳ್ಳಿ, ನಿರ್ದೇಶಕರುಗಳಾದ ಕಲೀಂವುಲ್ಲಾ, ನರಸಿಂಹಣ್ಣ, ಸಂದೀಪ್, ಪಿ.ರಾಜಣ್ಣ ಇವರುಗಳು ಹೊಸ ವರ್ಷ ಆಚರಣೆಯಲ್ಲಿ ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ಪ್ರಾದೇಶಿಕ ಅಸಮತೋಲನ, ಅಸಮಾನತೆ ತೊಡೆಯಲು ಸಹಕರಿಸಿ

» **ಬೆಂಗಳೂರು**



ರಾಜ್ಯದ ಜನರ ಆರ್ಥಿಕ ಶಕ್ತಿ ಹೆಚ್ಚಿಸಲು ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿ, ಪ್ರಾದೇಶಿಕ ಅಸಮತೋಲನ, ಅಸಮಾನತೆ ತೊಡೆಯಲು ನಿಮ್ಮ ಸಹಕಾರ ಹೆಚ್ಚು ಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಐಎಎಸ್, ಐಪಿಎಸ್ ಅಧಿಕಾರಿಗಳಿಗೆ ಕರೆ ನೀಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಿರಿಯ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳಿಗೆ ಹೊಸವರ್ಷದ ಶುಭಾಶಯಗಳನ್ನು ಕೋರಿ ಮಾತನಾಡಿದರು.

ಬದುಕಿನಲ್ಲಿ ಏಳು ಬೀಳು ಸಹಜ ಮತ್ತು ನಿರಂತರ. ಪರಿಸ್ಥಿತಿಗಳು ಸದಾ ನಮ್ಮ ಪರವಾಗಿ ಇರುವುದಿಲ್ಲ. ಆದರೆ ಆತ್ಮವಿಶ್ವಾಸ ಕಳೆದುಕೊಳ್ಳದೆ ಧೈರ್ಯದಿಂದ ಸಮಸ್ಯೆಗಳನ್ನು, ಸಂದರ್ಭಗಳನ್ನು ನಿರ್ವಹಿಸಿ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ. ಆಡಳಿತಾಂಗದಲ್ಲಿ ಐಎಎಸ್, ಐಪಿಎಸ್, ಐಆರ್ ಎಸ್, ಐಎಫ್ ಎಸ್ ಅಧಿಕಾರಿಗಳ ಜವಾಬ್ದಾರಿ ಹೆಚ್ಚು. ನಾವು ಕಾನೂನುಗಳನ್ನು ರಚಿಸಿ, ಜಾರಿ ಆಗುವ ದಿಕ್ಕಿನಲ್ಲಿ ನಿರಂತರ ನಿಗಾ ವಹಿಸುತ್ತೇವೆ. ಅಧಿಕಾರಿ ವರ್ಗ ಸಮಾಜಕ್ಕೆ ಪೂರಕವಾಗಿ ಕ್ರಿಯಾಶೀಲತೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.ಸಂವಿಧಾನ ಜಾರಿ ಸಂದರ್ಭದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಆಡಿದ ಮಾತುಗಳನ್ನು ಉಲ್ಲೇಖಿಸಿದ ಸಿಎಂ, ಸಮಾಜದ ಎಲ್ಲಾ ವರ್ಗಗಳಿಗೆ ಸಾಮಾಜಿಕ–ಆರ್ಥಿಕ ಸ್ವಾತಂತ್ರ್ಯ ಒದಗಿಸಬೇಕು. ಇಲ್ಲದಿದ್ದರೆ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಬರುವುದಿಲ್ಲ ಎಂದರು.ಭಾರತದ ಆರ್ಥಿಕತೆ ಕುಸಿತ ಕಂಡಿದ್ದಾಗ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಮನಮೋಹನ್ ಸಿಂಗ್ ಅವರು ದೇಶದ ಆರ್ಥಿಕತೆಗೆ ಹೊಸ ಚೈತನ್ಯ ನೀಡಿದರು. ದೇಶದ ಆರ್ಥಿಕ ಬೆಳವಣಿಗೆ ಆಗಿ ಇದರ ಲಾಭ ದೇಶದ ಜನರಿಗೆ ಲಭಿಸುವಂತೆ ಮಾಡಿದರು. ಸಂವಿಧಾನದ ನಿರ್ದೇಶಕ ತತ್ವಗಳಾದ ಸಮಾನತೆ, ಜಾತ್ಯತೀತತೆ, ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ದೇಶದ ಜನರ ಮೂಲಭೂತ ಹಕ್ಕುಗಳನ್ನಾಗಿ ಮಾಡಿದರು. ಮಾಹಿತಿ ಹಕ್ಕು, ಆಹಾರದ ಹಕ್ಕು, ಶಿಕ್ಷಣದ ಹಕ್ಕುಗಳನ್ನು ಕಡ್ಡಾಯ ಮಾಡಿದರು. ಆ ಮೂಲಕ ಸಮಾನತೆಯೆಡೆಗೆ ದೇಶವನ್ನು ಮುನ್ನಡೆಸಿದರು ಎಂದು ವಿವರಿಸಿದರು.

ಸಮಾನ ಅವಕಾಶಗಳು ಸಿಕ್ಕಾಗ ಸಮಾನತೆ ದಿಕ್ಕಿಗೆ ನಾವು ಸಾಗಬಹುದು ಎನ್ನುವ ಕಾರಣದಿಂದಲೇ ನಾವು ಐದು ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಜನರ ಕೈಯಲ್ಲಿ ಕಾಸು ಇರಬೇಕು, ಜನರ ಕೊಳ್ಳುವ ಶಕ್ತಿ ಹೆಚ್ಚಾಗಬೇಕು. ಇದಕ್ಕೆ ತಕ್ಕಂತೆ ರಾಜ್ಯದ ಜನರ ಜೇಬಲ್ಲಿ ಹಣ ಇರುವ ಗ್ಯಾರಂಟಿಗಳನ್ನು ನಾವು ಜಾರಿ ಮಾಡಿದೆವು. ಮಧ್ಯವರ್ತಿಗಳ ಹಾವಳಿ ಇಲ್ಲದಂತೆ ನೇರ ಜನರಿಗೆ ಹಣ ತಲುಪಿಸುತ್ತಿದ್ದೇವೆ. ಇದು ಇನ್ನಷ್ಟು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವ ಜವಾಬ್ದಾರಿ ನಿಮ್ಮೆಲ್ಲರ ಮೇಲಿದೆ ಎಂದರು. ಇಲ್ಲಿಯವರೆಗೂ 35 ಸಾವಿರ ಕೋಟಿ ರೂಪಾಯಿಗಳನ್ನು ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಖರ್ಚು ಮಾಡಿದ್ದೇವೆ. ಈಗಲಾದರೂ ನಂಜುಂಡಪ್ಪ ಅವರ ವರದಿಯಲ್ಲಿನ ಪ್ರಾದೇಶಿಕ ಅಸಮಾನತೆ ಕಡಿಮೆಯಾಗಿದೆಯಾ ಎನ್ನುವುದನ್ನು ಅಧ್ಯಯನ ನಡೆಸಿ ವರದಿ ನೀಡಲು ಗೋವಿಂದರಾವ್ ಅವರ ಸಮಿತಿ ರಚಿಸಲಾಗಿದೆ. ಏಕೆ ಉತ್ತರ ಕರ್ನಾಟಕದ ಅಸಮಾನತೆ ಕಡಿಮೆ ಆಗಿಲ್ಲ ಎನ್ನುವ ಬಗ್ಗೆಯೂ ಬೆಳಗಾವಿ ಅಧಿವೇಶನದಲ್ಲೂ ಚರ್ಚಿಸಿದ್ದೇವೆ. ಇದನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ. ನೀವೂ ಅಷ್ಟೆ ಗಂಭೀರವಾಗಿ ಪರಿಗಣಿಸಿ ಪ್ರಾದೇಶಿಕ ಅಸಮತೋಲನ ತೊಡೆದು ಹಾಕಲು ಶ್ರಮಿಸಬೇಕು ಎಂದರು. ಯುವ ಜನತೆ ನಮ್ಮ ಸಮಾಜದ ಆಸ್ತಿ. ಇವರ ಭವಿಷ್ಯ ಹಾಳಾಗದಂತೆ ಎಚ್ಚರ ವಹಿಸುವ ಸವಾಲನ್ನು ಐಪಿಎಸ್ ಅಧಿಕಾರಿಗಳು ಸ್ವೀಕರಿಸಬೇಕು. ಡ್ರಗ್ಸ್ ಹಾವಳಿ, ಅಪರಾಧಿಕ ಜಗತ್ತಿನ ಕಡೆಗೆ ಯುವ ಜನತೆ ಆಕರ್ಷಿತರಾಗದಂತೆ ಎಚ್ಚರ ವಹಿಸಿ. ತಂತ್ರಜ್ಞಾನ ಮತ್ತು ವಿಜ್ಞಾನದ ಪ್ರಗತಿ ಆಗುತ್ತಿದೆ. ಈ ಪ್ರಗತಿ ಅಪರಾಧಗಳಿಗೆ ಬಳಕೆ ಆಗದೆ ಯುವ ಜನರ ಭವಿಷ್ಯ ರೂಪಿಸಲು ಸಹಕಾರಿ ಆಗುವಂತೆ ಕರ್ತವ್ಯ ನಿರ್ವಹಿಸಿ ಎಂದು ಸಲಹೆ ನೀಡಿದರು.

ನೀವು ಅಧಿಕಾರಿ ವರ್ಗ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದರೆ ರಾಜ್ಯದಲ್ಲಿ ಅದ್ಭುತ ಬದಲಾವಣೆ, ಸುಧಾರಣೆಗಳನ್ನು ತರಲು ಸಾಧ್ಯವಿದೆ. ಇದಕ್ಕಾಗಿ ನಿಮ್ಮ ಕಾರ್ಯಕ್ಷಮತೆ ಬಳಕೆಯಾಗಲಿ ಎಂದರು. ಅಧಿಕಾರಿ ವರ್ಗಕ್ಕೆ ನಮ್ಮ ಸಲಹೆಯ ಅಗತ್ಯ ಇಲ್ಲ. ನೀವು ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಂಡರೆ ಸಾಕು. ಭ್ರಷ್ಟಾಚಾರ ವ್ಯವಸ್ಥೆ ಕಡಿಮೆ ಆಗುವ ಬದಲಿಗೆ ಹೆಚ್ಚಾಗುತ್ತಿರುವುದು ದುರಂತ. ಆದ್ದರಿಂದ ನಾವೆಲ್ಲರೂ ನಮ್ಮ ಆತ್ಮಸಾಕ್ಷಿಗೆ ತಕ್ಕಂತೆ ಪ್ರಾಮಾಣಿಕವಾಗಿ ನಡೆದುಕೊಳ್ಳೋಣ ಎಂದು ಕರೆ ನೀಡಿದರು.ನಮ್ಮ–ನಿಮ್ಮ ಉದ್ದೇಶ ಒಂದೇ. ಸಮಾಜದ ಪ್ರಗತಿ ಮತ್ತು ಆರೋಗ್ಯಕರ ಬದಲಾವಣೆ. ಇದಕ್ಕಾಗಿ ನಮ್ಮ ನಮ್ಮ ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳೋಣ ಎಂದು ಕರೆ ನೀಡಿದರು. ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಸುಳ್ಳನ್ನು ಪದೇ ಪದೇ ಹರಡಿಸುತ್ತಿದ್ದಾರೆ. ಇದು ಸುಳ್ಳು ಎನ್ನುವುದು ನಿಮಗೇ ಗೊತ್ತಿದೆ. ಹಿಂದಿನ ಸರ್ಕಾರ ಬಜೆಟ್ ಒಪ್ಪಿಗೆ ಪಡೆಯದೆ ಯದ್ವಾ ತದ್ವಾ ಟೆಂಡರ್ ಕರೆದು ಹಾನಿ ಮಾಡಿತ್ತು. ಸುಮಾರು 39 ಸಾವಿರ ಕೋಟಿ ಬಿಲ್ ಬಾಕಿ ಉಳಿಸಿ ಹೋಗಿದ್ದರು. ಜೊತೆಗೆ ಕೇಂದ್ರ ಸರ್ಕಾರದಿಂದ ನಮಗೆ ಅನ್ಯಾಯ ಮುಂದುವರೆದಿದೆ.

# ಸಂವಿಧಾನದ ರಕ್ಷಕರ ಅತ್ಯಂತ ಕಿರು ಪರಿಚಯ........




## List of President of India from 1950 to 2022




ಸಂವಿಧಾನ ಜಾರಿಯಾಗಿ ಸುಮಾರು 75 ವರ್ಷಗಳ ನಂತರ ಅದರ ಪ್ರಾತಿನಿಧಿಕ ರಕ್ಷಕರಾದ ಭಾರತದ ಗೌರವಾನ್ವಿತ 15 ರಾಷ್ಟ್ರಪತಿಗಳ ಕಾರ್ಯನಿರ್ವಹಣೆ ಕುರಿತು ಸರಳ ಸಂಕ್ಷಿಪ್ತ ಅಭಿಪ್ರಾಯ ಎರಡು ವಾಕ್ಯಗಳಲ್ಲಿ, ಗಣರಾಜ್ಯೋತ್ಸವದ ಸಂದರ್ಭದಲ್ಲಿ......

ರಾಜಧಾನಿಯಿಂದ ಸುಮಾರು 2200 ಕಿಲೋಮೀಟರ್ ದೂರದಲ್ಲಿ ಕುಳಿತು ಸಣ್ಣ ಅಧ್ಯಯನ ಮತ್ತು ಮಾಧ್ಯಮಗಳ ಸುದ್ದಿ – ಮಾಹಿತಿಯನ್ನು ಆಧರಿಸಿ.....

### 1) ಡಾಕ್ಟರ್ ಬಾಬು ರಾಜೇಂದ್ರ ಪ್ರಸಾದ್.....

**ಉತ್ತಮ.....**

ಒಬ್ಬ ಪ್ರತಿಭಾವಂತ – ಪ್ರಾಮಾಣಿಕ ವ್ಯಕ್ತಿ. ಸ್ವಾತಂತ್ರ್ಯ ಹೋರಾಟಗಾರ ಮತ್ತು ಸ್ವಾತಂತ್ರ್ಯ ನಂತರದ ಪ್ರಥಮ ರಾಷ್ಟ್ರಪತಿ. ಗಾಂಧಿ, ನೆಹರು, ಅಂಬೇಡ್ಕರ್, ಪಟೇಲ್ ಮುಂತಾದವರೊಂದಿಗೆ ಸಮನ್ವಯ ಸಾಧಿಸಿ ತಮ್ಮ ಕಾರ್ಯ ನಿರ್ವಹಿಸಿದರು.

### 2) ಡಾಕ್ಟರ್ ಸರ್ವಪಲ್ಲಿ ರಾಧಾಕೃಷ್ಣನ್....

**ಉತ್ತಮ......**

ಇವರು ಸಹ ಪ್ರತಿಭಾವಂತ ಮತ್ತು ಪ್ರಾಮಾಣಿಕರು. ರಾಷ್ಟ್ರಪತಿಗಳ ಕಚೇರಿಯ ಎಲ್ಲಾ ಶಿಷ್ಟಾಚಾರಗಳನ್ನು ಶಿಸ್ತು ಬದ್ದವಾಗಿ ನಿರ್ವಹಿಸಿದರು. ಇವರ ಜನ್ಮದಿನವನ್ನು ಶಿಕ್ಷಕರ ದಿನಾಚರಣೆಯಾಗಿ ಆಚರಿಸಲಾಗುತ್ತದೆ.....

### 3) ಜಾಕೀರ್ ಹುಸೇನ್....

**ಉತ್ತಮ.....**

ನಿಷ್ಠಾವಂತ ಮತ್ತು ವಿದ್ವತ್ತಿನ ವ್ಯಕ್ತಿಯಾದ ಇವರು ಸಹ ತಮ್ಮ ಸ್ಥಾನದ ಗೌರವಕ್ಕೆ ಚ್ಯುತಿ ಬಾರದಂತೆ ಎಲ್ಲಾ ಶಿಷ್ಟಚಾರ ಪಾಲಿಸಿ ಗೌರವಾನ್ವಿತ ಸ್ಥಾನ ಪಡೆದಿದ್ದಾರೆ......

### 4) ವಿ ವಿ ಗಿರಿ....

**ಸಮಾಧಾನಕರ....**

ಸ್ವಲ್ಪ ರಾಜಕೀಯ ಹಿನ್ನೆಲೆಯ ವ್ಯಕ್ತಿ. ಆದರು ಸ್ಥಾನ ಅಲಂಕರಿಸಿದ ಮೇಲೆ ಗೌರವದಿಂದಲೇ ನಡೆದುಕೊಂಡರು. ಇವರ ಕಾಲದಲ್ಲಿ ಸ್ವಲ್ಪ ರಾಜಕೀಯ ವ್ಯತ್ಯಾಸಗಳು ಸಹ ಘಟಿಸಿದವು. ಸ್ಥಾನದ ಘನತೆಗೆ ಯಾವುದೇ ಕುಂದು ತರಲಿಲ್ಲ.....

### 5) ಫಕ್ರುದ್ದೀನ್ ಆಲಿ ಅಹಮದ್....

**ಸಾಧಾರಣ.....**

ಸಂಪೂರ್ಣ ರಾಜಕೀಯ ಹಿನ್ನೆಲೆಯ ವ್ಯಕ್ತಿ. ದೇಶದಲ್ಲಿ ರಾಜಕೀಯ ಮೌಲ್ಯಗಳು ಕುಸಿಯುತ್ತಿದ್ದ ಸಮಯದಲ್ಲಿ ಅಧಿಕಾರ ಸ್ವೀಕರಿಸಿದರು. ಆದರೆ ದುರಾದೃಷ್ಟವಶಾತ್ ಅವಧಿ ಪೂರೈಸದೆ ಅಕಾಲಿಕ ಮರಣ ಹೊಂದಿದರು.

### 6) ನೀಲಂ ಸಂಜೀವ ರೆಡ್ಡಿ......

**ಸಾಧಾರಣ......**

ಪ್ರಧಾನಿ ಪದವಿಯ ಆಕಾಂಕ್ಷಿ. ಆದರೆ ರಾಷ್ಟ್ರಪತಿಯಾಗುವ ಅವಕಾಶ ದೊರೆಯಿತು. ರಾಜಕೀಯ ಏಳು ಬೀಳುಗಳ ನಡುವೆ ಶಿಷ್ಟಚಾರಕ್ಕೆ ಧಕ್ಕೆಯಾಗದಂತೆ ನೋಡಿಕೊಂಡರು. ಹೆಚ್ಚಿನ ಸಾಧನೆ ಏನು ಇಲ್ಲ....

### 7) ಗ್ಯಾನಿ ಜೇಲ್ ಸಿಂಗ್...

**ಸಮಾಧಾನಕರ....**

ವೃತ್ತಿಪರ ರಾಜಕಾರಣಿ. ಪಕ್ಷ ನಿಷ್ಠೆಗಾಗಿ ಒಲಿದ ಪದವಿ. ಅಧಿಕಾರದ ಅವಧಿಯಲ್ಲಿ ಸ್ವಲ್ಪ ವಿವಾದಾಸ್ಪದ ವ್ಯಕ್ತಿ. ಆಗಿನ ಪ್ರಧಾನಿ ರಾಜೀವ್ ಗಾಂಧಿಯವರೊಂದಿಗೆ ಸ್ವಲ್ಪ ಮುನಿಸು. ಕೊನೆಗೆ ಎಲ್ಲವೂ ಸುಖಾಂತ್ಯ. ದೊಡ್ಡ ಸಾಧನೆ ಏನು ಇಲ್ಲ...

### 8) ಆರ್ ವೆಂಕಟರಾಮನ್....

**ಉತ್ತಮ.....**

ಪ್ರತಿಭಾವಂತ ಮತ್ತು ಉತ್ತಮ ಆಡಳಿತಗಾರ. ಆದರೆ ಅಧ್ಯಕ್ಷೀಯ ಅವಧಿಯಲ್ಲಿ ಬಹುತೇಕ ವಿಶ್ರಾಂತ ಮನಸ್ಥಿತಿ ಮತ್ತು ಯಥಾವತ್ ಶಿಷ್ಟಾಚಾರ ಪಾಲನೆ. ಸ್ಥಾನದ ಘನತೆ ಕಾಪಾಡಿದರು. ಹೇಳಿಕೊಳ್ಳುವ ಸಾಧನೆ ಇಲ್ಲ.....

### 9) ಶಂಕರ್ ದಯಾಳ್ ಶರ್ಮ.....

**ಕಳಪೆ.....**

ಸ್ಥಾನ ಅಲಂಕಾರಿಸಿದಾಗ ಬಹುತೇಕ ವಿಶ್ರಾಂತ ಮನಸ್ಥಿತಿ. ಕೇವಲ ಔಪಚಾರಿಕ ಕರ್ತವ್ಯವನ್ನು ಮಾತ್ರ ನಿರ್ವಹಿಸಿರುವ ರೀತಿಯ ಆಡಳಿತ. ಯಾವುದೇ ಹೆಚ್ಚಿನ ಸಾಧನೆ ಇಲ್ಲ....

### 10) ಕೆ ಆರ್ ನಾರಾಯಣನ್....

**ಉತ್ತಮ......**

ಪ್ರತಿಭಾವಂತ ಮತ್ತು ದಕ್ಷ ಆಡಳಿತಗಾರ. ಅಧ್ಯಕ್ಷ ಸ್ಥಾನದಲ್ಲಿದ್ದಾಗ ಒಂದಷ್ಟು ಸಾರ್ವಜನಿಕ ಸಮಸ್ಯೆಗಳ ಸ್ಪಂದನೆ ಇರುವುದು ಕಂಡುಬರುತ್ತದೆ. ಸ್ಥಾನದ ಘನತೆಯನ್ನು ಕಾಪಾಡಿದವರು.....

### 11) ಡಾಕ್ಟರ್ ಎಪಿಜೆ ಅಬ್ದುಲ್ ಕಲಾಂ.....

**ಅತ್ಯುತ್ತಮ.....**

ರಾಷ್ಟ್ರಪತಿಗಳಾಗಿ ಒಂದು ಮಾದರಿಯನ್ನು, ಸ್ಫೂರ್ತಿಯನ್ನು ಜನರಲ್ಲಿ ಉಂಟುಮಾಡಿದರು. ಸದಾ ಚಟುವಟಿಕೆಯಿಂದ ಇದ್ದು ರಾಷ್ಟ್ರಪತಿ ಹುದ್ದೆಯನ್ನು ಸಾರ್ವಜನಿಕರಿಗೆ ಪರಿಚಯಿಸಿದರು. ಬಹುಶಃ ಹುದ್ದೆಯ ಜನಪ್ರಿಯತೆಯ ದೃಷ್ಟಿಯಿಂದ ರಾಷ್ಟ್ರಪತಿಗಳಲ್ಲಿ ಅತ್ಯುತ್ತಮ ಕಲಾಂ ಅವರಿಗೆ ಸಲ್ಲಬೇಕು....

### 12) ಶ್ರೀಮತಿ ಪ್ರತಿಭಾ ಪಾಟೀಲ್....

**ಸಾಧಾರಣ......**

ಮೊದಲ ಮಹಿಳಾ ರಾಷ್ಟ್ರಪತಿ ಎಂಬ ಹೆಗ್ಗಳಿಕೆ ಹೊರತುಪಡಿಸಿ ಹೆಚ್ಚಿನ ಸಾಧನೆ ಏನು ಇಲ್ಲ. ಕೇವಲ ಶಿಷ್ಟಾಚಾರದ ಅಧ್ಯಕ್ಷೆ ಮಾತ್ರ. ಬಹುತೇಕ ವಿಶ್ರಾಂತ ಜೀವನ....

### 13) ಪ್ರಣವ್ ಮುಖರ್ಜಿ....

**ಉತ್ತಮ.....**

ಸಂಪೂರ್ಣ ರಾಜಕೀಯ ಹಿನ್ನೆಲೆಯ ವ್ಯಕ್ತಿಯಾದರು ಪ್ರತಿಭಾವಂತ ಮತ್ತು ದಕ್ಷ ಆಡಳಿತಗಾರ. ಹುದ್ದೆಯ ಘನತೆಯನ್ನು ಎತ್ತಿ ಹಿಡಿದರು. ಶಿಷ್ಟಾಚಾರ ಪಾಲನೆ ಮಾಡಿದರು. ಇತರರಿಗೆ ಹೋಲಿಸಿದರೆ ಉತ್ತಮ.

### 14) ಶ್ರೀ ರಾಮನಾಥ್ ಕೋವಿಂದ್.....

**ಕಳಪೆ....**

ಬಹುಶಃ ಭಾರತದ ರಾಷ್ಟ್ರಪತಿಗಳಲ್ಲಿ ಅತ್ಯಂತ ಮೌನ ಮತ್ತು ರಬ್ಬರ್ ಸ್ಟಾಂಪ್ ರಾಷ್ಟ್ರಪತಿ ಇವರೇ ಇರಬೇಕು. ಯಾವುದೇ ಹೇಳಿಕೊಳ್ಳುವ ಚಟುವಟಿಕೆಗಳನ್ನು ನಿರ್ವಹಿಸಲಿಲ್ಲ. ಕೇವಲ ಒಂದು ಗೌರವಯುತ ಸ್ಥಾನ ಎಂದೇ ಪರಿಗಣಿಸಿದರು. ಸ್ಥಾನದ ಘನತೆಯನ್ನು ಕುಗ್ಗಿಸಿದರು. ಯಾರ ನೆನಪಿನಲ್ಲಿ ಸಹ ಉಳಿಯಲಿಲ್ಲ.....

### 15) ಶ್ರೀಮತಿ ದ್ರೌಪದಿ ಮುರ್ಮು...

**ಇಲ್ಲಿಯವರೆಗೆ ಕಳಪೆ...**

ಬುಡಕಟ್ಟು ಜನಾಂಗದ ಶ್ರಮಜೀವಿ ಹೆಣ್ಣು ಮಗಳು. ಇನ್ನೂ ಸಾಕಷ್ಟು ಸಮಯವಿದೆ. ಆದರೆ ಸಿಕ್ಕ ಅವಕಾಶವನ್ನು ಸರಿಯಾಗಿ ಉಪಯೋಗಿಸಿಕೊಳ್ಳುತ್ತಿಲ್ಲ. ಸ್ವಾಭಿಮಾನ ಮೆರೆಯಬೇಕು. ವಿಶ್ರಾಂತ ಜೀವನ ನಡೆಸುತ್ತಿರುವಂತಿದೆ....

ಇದು ಆಳ ಅಧ್ಯಯನದಿಂದ ಮೂಡಿದ ಅಭಿಪ್ರಾಯವಲ್ಲ. ರಾಷ್ಟ್ರಪತಿಗಳ ಬಗ್ಗೆ ಸಾಮಾನ್ಯ ಜನರ ಸಾಮಾನ್ಯ ತಿಳಿವಳಿಕೆಗಾಗಿ ಮಾತ್ರ. ಕೆಲವು ಅಭಿಪ್ರಾಯ ತಪ್ಪೂ ಆಗಿರಬಹುದು.

ಸಂವಿಧಾನದ ನಿಜವಾದ Custodian ರಾಷ್ಟ್ರಪತಿಗಳು. ಅವರು ಸಂವಿಧಾನದ ಆಶಯಗಳನ್ನು, ಮೂಲಭೂತ ಹಕ್ಕು ಮತ್ತು ಕರ್ತವ್ಯಗಳನ್ನು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಸರಿಯಾಗಿ ಮೇಲ್ವಿಚಾರಣೆ ಮಾಡಬೇಕು. ಆ ನಿಟ್ಟಿನಲ್ಲಿ ಸರ್ಕಾರಗಳು ನಿರ್ಲಕ್ಷ್ಯ ತೋರಿದಾಗ ಎಚ್ಚರಿಕೆ ನೀಡಬೇಕು. ಉಳಿದ ಸಮಯದಲ್ಲಿ ಅವಕಾಶ ಉಪಯೋಗಿಸಿಕೊಂಡು ಅಬ್ದುಲ್ ಕಲಾಂ ರೀತಿ ಸಾರ್ವಜನಿಕರೊಂದಿಗೆ ಸಂವಾದ ನಡೆಸಬೇಕು.....

ಆದರೂ ಭಾರತದ ಪ್ರಜಾಪ್ರಭುತ್ವದ ಬೇರುಗಳು ಗಟ್ಟಿಯಾಗಿ ಉಳಿಯಲು ಈ ಎಲ್ಲಾ ರಾಷ್ಟ್ರಪತಿಗಳ ಕೊಡುಗೆ ಇದೆ. ಅದಕ್ಕಾಗಿ ಅವರುಗಳನ್ನು ಅಭಿನಂದಿಸುತ್ತಾ....

ಎಲ್ಲರಿಗೂ ಗಣರಾಜ್ಯೋತ್ಸವದ ಶುಭಾಶಯಗಳು.......
ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ರಸಋಷಿ ಕುವೆಂಪು ನೆನಪಿನ ಅರ್ಥಪೂರ್ಣ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮ



» **ಹೊಸದುರ್ಗ**

ಪಟ್ಟಣದ ಅನಿಕೇತನ ಬಳಗ ಮತ್ತು ಕಲಾಸಿರಿ ಶಿಕ್ಷಕರ ಕಲಾಬಳಗದ ಆಶ್ರಯದಲ್ಲಿ ಭಾನುವಾರ ರಂದು ಪಟ್ಟಣದ ಶ್ರೀ ರಾಮಕೃಷ್ಣ ಸದನದಲ್ಲಿ ರಸಋಷಿ, ರಾಷ್ಟ್ರಕವಿ ಕುವೆಂಪುರವರ ನೆನಪಿನ ಅರ್ಥಪೂರ್ಣವಾದ ವಿಶ್ವಮಾನವ ದಿನಾಚರಣೆಯನ್ನು ಆಚರಿಸಲಾಯಿತು.

ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಪಿ. ಎಲ್ ಲೋಕೇಶ್ವರ್ ರವರು ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪನವರ ನೇತೃತ್ವ ಮತ್ತು ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಥಿಯಾಸಫಿ ಸೊಸೈಟಿಯ ತಾಲ್ಲೂಕು ಅಧ್ಯಕ್ಷ ಬಿ.ಕೆ.ನಾಗರಾಜಪ್ಪ ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯ ಕುರಿತು ಉಪನ್ಯಾಸ ನೀಡಿದರು.

ಶ್ರೀ ಕುವೆಂಪು ಪ್ರತಿಷ್ಠಾನ, ಕುಪ್ಪಳಿ ಇವರ ಪ್ರಾಯೋಜಕತ್ವದಲ್ಲಿ ಚಂದ್ರಶೇಖರರಂಗಾಪುರ ಇವರ ನಿರ್ದೇಶನದ ಶ್ರೀ ಕುವೆಂಪುರವರ ರಚನೆಯ "ಮಹಾರಾತ್ರಿ"ನಾಟಕವನ್ನು ಅತ್ಯಂತ ಮನೋಜ್ಞವಾಗಿ ಅಭಿನಯಿಸಿದರು.
ನಂತರ ಮಾತನಾಡಿದ ಪಿ.ಎಲ್ ಲೋಕೇಶ್ ನಾಟಕಾಭಿನಯವು ಒಂದು ದೃಶ್ಯಕಾವ್ಯದಂತಿತ್ತು ಎಂದು ಬಣ್ಣಿಸಿದರು, ಕುವೆಂಪು ರವರ ಭಾಷೆಯ ಕಾವ್ಯಸತ್ವವನ್ನು ಎರಡೂ ಕಾರ್ಯಕ್ರಮಗಳ ಮೂಲಕ ಉಣಬಡಿಸಿದ ಈ ಕಾರ್ಯಕ್ಕೆ ಉಪನ್ಯಾಸಕರಿಗೂ ಮತ್ತು ಕಲಾಸಿರಿ ಶಿಕ್ಷಕ ಬಳಗದ ತಂಡದವರಿಗು ಶ್ರೀ ರಾಮಕೃಷ್ಣ ಸದನದ ವತಿಯಿಂದ ಪುಸ್ತಕಗಳನ್ನು ಕೊಡಮಾಡುವ ಮೂಲಕ ನಿವೃತ್ತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಅಭಿನಂದಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T